# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಶಾಂತಿ ನೆಮ್ಮದಿ ಇಲ್ಲವೆಂದು ಕೊರಗಬೇಡ
ಆತ್ಮತೃಪ್ತಿಯ ಕೆಲಸ ಮಾಡಿ ಪಡೆದುಕೋ ಅದನ್ನ..
ರೂಪ ಸೌಂದರ್ಯಕೆ ಮರುಳಾಗಿ ಚಿಂತಿಸಬೇಡ
ನಿನ್ನ ಅಂತರಾಳದಲ್ಲಿ ರೂಪಿಸಿಕೋ ಅದನ್ನ..
ಪರರ ಆಸ್ತಿ ಸಂಪತ್ತು ನೋಡಿ ನನಗಿಲ್ಲವೆನ್ನಬೇಡ
ನ್ಯಾಯಮಾರ್ಗದಲ್ಲಿ ನಡೆದು ಸಂಪಾದಿಸಿಕೋ ಅದನ್ನ..
ನೀನೇ ತಪ್ಪು ಮಾಡಿ ಪರರಿಗೆ ಕೈ ತೋರಿಸಬೇಡ
ಏಟು ತಿನ್ನುವ ಮುನ್ನ ಸರಿಪಡಿಸಿಕೋ ಅದನ್ನ..
ಅಧಿಕಾರಕ್ಕಾಗಿ ಎಂದಿಗೂ ಹಾತೊರೆಯಲೇಬೇಡ
ಕಾಲಬಲ ಬರುವ ಹಾಗೆ ಸ್ವೀಕರಿಸಿಕೋ ಅದನ್ನ..

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 03-10-2025 to 09-10-2025 ಬೆಲೆ:10-00 ಸಂಪುಟ–1 ಸಂಚಿಕೆ–1 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಆಚರಣೆಗಳು ವಿಭಿನ್ನ. ನಾಗಾರಾಧನೆ, ಭೂತಾರಾಧನೆ ಈ ನೆಲದ ಜೀವಾಳ. ಹಾಗೆಂದು ದೇವರ ಆರಾಧನೆಯಲ್ಲಿ ಯಾವುದೇ ಕಡಿಮೆ ಇಲ್ಲ. ಅದರಲ್ಲೂ ನವರಾತ್ರಿ ಬಂತೆಂದರೆ ದುರ್ಗೆಯ ಒಂಬತ್ತು ಅವತಾರಗಳನ್ನು ಶ್ರದ್ಧೆಯಿಂದ ಆರಾದಿಸುತ್ತದೆ. ನವರಾತ್ರಿಯಲ್ಲಿ ದುರ್ಗೆಯ ವಾಹನವಾದ ಹುಲಿಯ ವೇಷವನ್ನು ಹರಕೆಯ ರೂಪದಲ್ಲಿ ಹಾಕುವುದು ಮಾಡಿಕೆ ಮತ್ತು ನಂಬಿಕೆ. ಇಂತಹ ಹುಲಿ ನೃತ್ಯಗಳನ್ನು ನಗರ ಹಳ್ಳಿಗಳೆನ್ನದೆ ಎಲ್ಲಾ ಕಡೆಯಲ್ಲೂ ಹುಲಿ ನೃತ್ಯ ಪ್ರೀಯರು ಕಣ್ತುಂಬಿಕೊಳ್ಳುತ್ತಾರೆ. ಇಂತಹ ಹುಲಿ ಕುಣಿತವನ್ನು ಗೋಕುಲಾಷ್ಟಮಿ, ಗಣೇಶ ಚೌತಿಯಂದು ಕಾಣಸಿಗುತ್ತದೆ.

## ಹಿಂದೂಗಳ ಏಕತೆ ಭದ್ರತೆಯನ್ನು ಖಾತ್ರಿಪಡಿಸುತ್ತದೆ–ಭಾಗವತ್



ನವದೆಹಲಿ : ಹಿಂದೂಗಳ ಏಕತೆ ಭದ್ರತೆಯನ್ನು ಖಾತ್ರಿಪಡಿಸುತ್ತದೆ, ನೇಪಾಳದಂತಹ ಕ್ರಾಂತಿ ಯಾವುದೇ ಬದಲಾವಣೆ ತರುವುದಿಲ್ಲ ಎಂದು ಆರ್‌ಎಸ್‌ಎಸ್ ಸರಸಂಘ ಚಾಲಕ ಮೋಹನ್ ಭಾಗವತ್ ಹೇಳಿದ್ದಾರೆ. ಪಹಲ್ಗಾಮ್ ದಾಳಿಯಲ್ಲಿ ಭಯೋತ್ಪಾದಕರು ಹಿಂದೂಗಳನ್ನು ಅವರ ಧರ್ಮವನ್ನು ಕೇಳಿ ನಂತರ ಕೊಂದರು. ನಮ್ಮ ಸರ್ಕಾರ ಮತ್ತು ಸೈನ್ಯವು ಸರಿಯಾಗಿ ಪ್ರತಿಕ್ರಿಯಿಸಿದೆ. ಈ ಘಟನೆಯ ನಂತರವೇ ನಮಗೆ ಸ್ನೇಹಿತ ಮತ್ತು ಶತ್ರು ಯಾರೆಂದು ತಿಳಿಯಿತು ಎಂದರು. ಅಶಾಂತಿಯುತ ಚಳವಳಿಗಳು ಅಲ್ಲಿನ ಜನರ ಹಿತಾಸಕ್ತಿಗಳನ್ನು ಪೂರೈಸುವುದಿಲ್ಲ, ಬದಲಾಗಿ ಬಾಹ್ಯ ಶಕ್ತಿಗಳ ಉದ್ದೇಶಗಳನ್ನು ಪೂರೈಸುತ್ತಿವೆ ಎಂದು ಹೇಳಿದರು. ನಾವು ಎಲ್ಲರ ಬಗ್ಗೆಯೂ ಸ್ನೇಹಪರ ಭಾವನೆಗಳನ್ನು ಹೊಂದಿದ್ದೇವೆ. ಆದರೆ ನಾವು ಹೆಚ್ಚು ಜಾಗರೂಕರಾಗಿರಬೇಕು ಮತ್ತು ನಮ್ಮನ್ನು ನಾವು ರಕ್ಷಿಸಿಕೊಳ್ಳುವ ಸಾಮರ್ಥ್ಯವನ್ನು ಹೊಂದಿರಬೇಕು. ಅಮೆರಿಕ ಅಳವಡಿಸಿಕೊಂಡಿರುವ ಹೊಸ ಸುಂಕ ನೀತಿಯು ಬಹುತೇಕ ಎಲ್ಲರ ಮೇಲೆ ಪರಿಣಾಮ ಬೀರುತ್ತಿದೆ. ಆದ್ದರಿಂದ, ನಾವು ಜಾಗತಿಕವಾಗಿ ಸಂಬಂಧಗಳನ್ನು ನಿರ್ಮಿಸಬೇಕಾಗಿದೆ. ನಾವು ಸ್ವಾವಲಂಬಿಗಳಾಗಬೇಕು, ಅದನ್ನು ಕಡ್ಡಾಯವಾಗಿ ಮಾಡಬಾರದು, ಬದಲಾಗಿ ಬದುಕುವ 3ನೇ ಪುಟಕ್ಕೆ...



## ಯುವಜನತೆ ಗಾಂಧೀಜಿ ಚಿಂತನೆ ಅರಿಯಬೇಕು : ಗುಂಡೂರಾವ್



ಮಂಗಳೂರು : ಸ್ವಾತಂತ್ರ ಹೋರಾಟದಲ್ಲಿ ಮಹಾತ್ಮ ಗಾಂಧೀಜಿಯವರ ಪಾತ್ರ ಸ್ಮರಣೀಯ. ಯುವಜನತೆ ಗಾಂಧೀಜಿಯವರ ಸಂದೇಶವನ್ನು ಅರ್ಥೈಸಿಕೊಂಡು ಅವರ ಜೀವನ ಚರಿತ್ರೆಯನ್ನು ತಿಳಿದುಕೊಳ್ಳಬೇಕು ಎಂದು ಅರೋಗ್ಯ ಮತ್ತು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಅವರು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಮಂಗಳೂರು ಮಹಾನಗರ ಪಾಲಿಕೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಾರ್ವಜನಿಕ ಶಿಕ್ಷಣ ಇಲಾಖೆ ಭಾರತ ಸೇವಾದಳ ದಕ್ಷಿಣ ಕನ್ನಡ ಜಿಲ್ಲೆ ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ ನಗರದ ರಾಜಾಜಿ ಪಾರ್ಕ್‌ನಲ್ಲಿ ನಡೆದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿ, ಗಾಂಧೀಜಿಯವರು ಅಸ್ಪೃಶ್ಯತೆ ವಿರುದ್ಧ ಮತ್ತು ಮಹಿಳೆಯರನ್ನು ಸಬಲರನ್ನಾಗಿ ಮಾಡಲು ಅನೇಕ ಹೋರಾಟಗಳನ್ನು ನಡೆಸಿದ್ದಾರೆ. ಬಡವರಿಗೆ ತಮ್ಮ ಹಕ್ಕುಗಳನ್ನು ದೊರಕಿಸುವಲ್ಲಿ ಅವರ ಪಾತ್ರ ಶ್ಲಾಘನೀಯ. ಮಹಾತ್ಮ ಗಾಂಧೀಜಿ ಅವರು ರಾಷ್ಟ್ರಕ್ಕೆ ನೀಡಿದ ಕೊಡುಗೆ ಅಪಾರವಾದದ್ದು. ವಿದ್ಯಾರ್ಥಿಗಳು ಗಾಂಧೀಜಿಯ ತತ್ವಗಳನ್ನು ತಮ್ಮಲ್ಲಿ ಅಳವಡಿಸಿಕೊಳ್ಳಬೇಕು. ಜನರು ಪರಸ್ಪರ ಸಹೋದರತ್ವ, ಪ್ರೀತಿ ಗೌರವವನ್ನು ನೀಡುವ ಮೂಲಕ ಸಹಬಾಳ್ವೆಯಿಂದ ಇದ್ದರೆ ನಮ್ಮ ದೇಶದಲ್ಲಿ ನಡೆಯುವ ಹಿಂಸಾತ್ಮಕ ಘಟನೆ ಗಳನ್ನು ತಪ್ಪಿಸಬಹುದು. ಗಾಂಧಿ ಜಯಂತಿ ಪ್ರಯುಕ್ತ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಮಕ್ಕಳು ಗಾಂಧೀಜಿಯವರ ಚಿಂತನೆಗಳನ್ನು ಮುಂದಿನ ತಲೆಮಾರಿಗೆ ತಿಳಿಯುವಂತಾಗಿದೆ ಎಂದರು.

## ರೈತರ ಸಾಲ ಮನ್ನಾಕ್ಕಿಂತ ಗ್ಯಾರಂಟಿ ಮುಖ್ಯ: ಚಲುವರಾಯಸ್ವಾಮಿ



ಮೈಸೂರು : ರೈತರ ಸಾಲ ಮನ್ನಾ ಮಾಡುವಂತೆ ಕೆಲವರು ಒತ್ತಾಯ ಮಾಡುತ್ತಿದ್ದಾರೆ. ಆದರೆ, ಸಾಲ ಮನ್ನಾದಿಂದ ಎಷ್ಟು ಮಂದಿಗೆ ಅನುಕೂಲವಾಗುತ್ತದೆ? ನಮ್ಮ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ಶೇಕಡ 95ರಷ್ಟು ಜನರಿಗೆ ಸೌಲಭ್ಯ ದೊರೆಯುತ್ತಿದೆ. ಹಾಗಾಗಿ ಪಂಚ ಗ್ಯಾರಂಟಿ ಮುಖ್ಯ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಪ್ರತಿಪಾದಿಸಿದರು. ದಸರಾ ಮಹೋತ್ಸವದ ಅಂಗವಾಗಿ ರೈತ ದಸರಾ ಕಾರ್ಯಕ್ರಮವನ್ನು ಭತ್ತ ಕುಟ್ಟುವ ಮೂಲಕ, ಹೊಂಬಾಳೆ ಅರಳಿಸುವ ಮೂಲಕ ಅವರು ಉದ್ಘಾಟಿಸಿ, ಮಾತನಾಡಿ, ರೈತರಿಗೆ ಸಾಲ ಮನ್ನಾಕ್ಕಿಂತ ಪಂಚ ಗ್ಯಾರಂಟಿ ಯೋಜನೆಯಿಂದ ಹೆಚ್ಚು ಅನುಕೂಲವಾಗಿದೆ. ಹಿಂದಿನ ಸರ್ಕಾರಗಳು ಸಾಲಮನ್ನಾಕ್ಕೆ 5 ರಿಂದ 12 ಸಾವಿರ ಕೋಟಿ 3ನೇ ಪುಟಕ್ಕೆ...







# ಹಿಂದೂಗಳ ಏಕತೆ ಭದ್ರತೆಯನ್ನು ಖಾತ್ರಿಪಡಿಸುತ್ತದೆ – ಭಾಗವತ್

ಒಂದನೇ ಪುಟದಿಂದ......

ಮತ್ತು ನಮ್ಮನ್ನು ನಾವು ರಕ್ಷಿಸಿಕೊಳ್ಳುವ ಸಾಮರ್ಥ್ಯವನ್ನು ಹೊಂದಿರಬೇಕು. ಅಮೆರಿಕ ಅಳವಡಿಸಿಕೊಂಡಿರುವ ಹೊಸ ಸುಂಕ ನೀತಿಯು ಬಹುತೇಕ ಎಲ್ಲರ ಮೇಲೆ ಪರಿಣಾಮ ಬೀರುತ್ತಿದೆ. ಆದ್ದರಿಂದ, ನಾವು ಜಾಗತಿಕವಾಗಿ ಸಂಬಂಧಗಳನ್ನು ನಿರ್ಮಿಸಬೇಕಾಗಿದೆ. ನಾವು ಸ್ವಾವಲಂಬಿಗಳಾಗಬೇಕು, ಅದನ್ನು ಕಡ್ಡಾಯವಾಗಿ ಮಾಡಬಾರದು, ಬದಲಾಗಿ ಬದುಕುವ ಮಾರ್ಗವನ್ನಾಗಿ ಕಂಡುಕೊಳ್ಳಬೇಕು. ಜಗತ್ತು ಅಶಾಂತಿ ಮತ್ತು ಪ್ರಕ್ಷುಬ್ಧತೆಯನ್ನು ಅನುಭವಿಸುತ್ತಿದೆ.ಮತ್ತು ಇದರ ನಡುವೆ, ಜಗತ್ತು ಭಾರತದತ್ತ ಭರವಸೆಯಿಂದ ನೋಡುತ್ತಿದೆ. ಭಾರತವು ಮಾರ್ಗದರ್ಶನ ನೀಡಬೇಕೆಂದು ಬಯಸುತ್ತಿವೆ. ಮಾನವರು ದೈಹಿಕವಾಗಿ ಅಭಿವೃದ್ಧಿ ಹೊಂದುತ್ತಾರೆ, ಆದರೆ ನೈತಿಕವಾಗಿ ಅಲ್ಲ, ಅಭಿವೃದ್ಧಿ ಎಲ್ಲರಿಗೂ ಅತ್ಯಗತ್ಯ. ಹಿಂದೂ ಧರ್ಮ ಎಂದಿಗೂ ರಾಜ್ಯವನ್ನು ಅವಲಂಬಿಸಿಲ್ಲ. ಹಿಂದೂ ಧರ್ಮವು ಒಂದು ರಾಷ್ಟ್ರ. ನಮ್ಮದು ಹಿಂದೂ ರಾಷ್ಟ್ರ. ಇದನ್ನು ಜಾತಿ, ಮತ ಅಥವಾ ಸಮುದಾಯದ ಆಧಾರದ ಮೇಲೆ ವಿಭಜಿಸಲು ಸಾಧ್ಯವಿಲ್ಲ. ಹಿಂದೂಗಳ ಏಕತೆ ಭದ್ರತೆಯ ಖಾತರಿಯಾಗಿದೆ. ಬದಲಾವಣೆ ಪ್ರಜಾಪ್ರಭುತ್ವದ ವಿಧಾನಗಳ ಮೂಲಕ ಮಾತ್ರ ಬರುತ್ತದೆ. ಜಗತ್ತು ಪರಸ್ಪರ ಅವಲಂಬನೆಯ ಮೇಲೆ ಬದುಕುತ್ತದೆ, ಆದರೆ ನಾವು ಸ್ವಾವಲಂಬಿಗಳಾಗಬೇಕು ಮತ್ತು ಜಾಗತಿಕ ಜೀವನದ ಏಕತೆಯನ್ನು ಗಮನದಲ್ಲಿಟ್ಟುಕೊಂಡು, ನಮ್ಮ ಸ್ವಂತ ಇಚ್ಛೆಯಿಂದ ಬದುಕಬೇಕು, ಈ ಪರಸ್ಪರ ಅವಲಂಬನೆಯನ್ನು ಶಾಶ್ವತವಾಗಲು ಬಿಡಬಾರದು ಎಂದರು.

# ರೈತರ ಸಾಲ ಮನ್ನಾಕ್ಕಿಂತ ಗ್ಯಾರಂಟಿ ಮುಖ್ಯ : ಚಲುವರಾಯಸ್ವಾಮಿ

ಒಂದನೇ ಪುಟದಿಂದ......

ರು.ವ್ಯಯಿಸಿರಬಹುದು. ಆದರೆ, ಗ್ಯಾರಂಟಿ ಯೋಜನೆಗಳಿಗೆ ಎರಡೂವರೆ ವರ್ಷದಲ್ಲಿ 3 ಲಕ್ಷ ಕೋಟಿ ಖರ್ಚು ಮಾಡಲಾಗಿದೆ. ಸೊಸೈಟಿಗೆ ಸರಿಯಾಗಿ ಸಾಲ ಪಾವತಿಸದವರು ಮಾತ್ರ ಮನ್ನಾ ಮಾಡುವಂತೆ ಕೇಳುತ್ತಾರೆ. ಇದು ಸರಿಯಲ್ಲ ಎಂದರು. ಇಡೀ ರಾಷ್ಟ್ರದಲ್ಲಿ ರಸಗೊಬ್ಬರದ ಕೊರತೆಯಿದೆ. ಆಮದು, ಉತ್ಪಾದನೆಯಿಲ್ಲದಂತಾಗಿ ಪೂರೈಕೆಯ ಕೊರತೆ ಎದುರಾಗಿದೆ. ಇದು ಕೇಂದ್ರ ಸರ್ಕಾರದ ಜವಾಬ್ದಾರಿಯಾದರೂ, ರಾಜ್ಯ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡಲಾಗುತ್ತಿದೆ. ಬಿಜೆಪಿಯವರು ಸುಳ್ಳು ಹೇಳಿ ಗೊಂದಲ ಮೂಡಿಸುತ್ತಿದ್ದಾರೆ ಎಂದು ಆರೋಪಿಸಿದರು. ಆರಂಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಮಹತ್ವ ಜನರಿಗೆ ಅರ್ಥವಾಗುತ್ತಿಲ್ಲ ಎಂಬ ಬೇಸರವಿತ್ತು. ಆದರೆ, ಕಳೆದ ಎರಡೂವರೆ ವರ್ಷದಲ್ಲಿ ಜನರಿಗೆ ನಿಧಾನವಾಗಿ ಗ್ಯಾರಂಟಿ ಯೋಜನೆಯ ಮಹತ್ವ ಅರ್ಥವಾಗುತ್ತಿದೆ. ಇದರಿಂದ ನಮಗೆ ಈಗ ತೃಪ್ತಿ ಇದೆ ಎಂದರು.

# ಪರಿಸರ ಇದ್ದರೆ ಮನುಕುಲದ ಉಳಿವು : ಡಾ. ಶಂಕರ್ ಲಾಲ್



ಶಿವಮೊಗ್ಗ : ಹಸಿರು ಜೀವನಕ್ಕೆ ಅತಿ ಅವಶ್ಯಕ. ಪರಿಸರ ಇದ್ದರೆ ಮನುಕುಲದ ಉಳಿವು. ಆರೋಗ್ಯ ಮತ್ತು ಆಯಸ್ಸು ವೃದ್ಧಿಸಲು ಹಸಿರು ನೆರವಾಗುತ್ತದೆ. ಪ್ರತಿಯೊಬ್ಬರೂ ಜೀವನದಲ್ಲಿ ಕನಿಷ್ಠ ಏಳು ಗಿಡಗಳನ್ನಾದರೂ ನೆಟ್ಟು ಬೆಳೆಸಿದರೆ, ಅದಕ್ಕಿಂತ ಉತ್ತಮ ಕಾರ್ಯ ಬೇರೊಂದಿಲ್ಲ ಎಂದು ದೊಡ್ಡಮ್ಮ ದೇವಿ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ, ಮಧ್ಯಪ್ರದೇಶದ ಇಂದೋರ್‌ನ ನಿವಾಸಿ, ಪರಿಸರ ಪ್ರೇಮಿ ಡಾ. ಶಂಕರ್ ಲಾಲ್ ಗಾರ್ಗ್ ಹೇಳಿದರು. ಶಿವಮೊಗ್ಗದ ಪ್ರೆಸ್ ಕಾಲೋನಿಯ ದೊಡ್ಡಮ್ಮ ಚಾರಿಟೇಬಲ್ ಟ್ರಸ್ಟ್ ನಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಶ್ರೀ ದೊಡ್ಡಮ್ಮ ದೇವಿ ರಾಷ್ಟ್ರೀಯ ಪ್ರಶಸ್ತಿ ಒಂದು ಲಕ್ಷ ರೂ.ಗೌರವ ಸ್ವೀಕರಿಸಿ ಮಾತನಾಡಿದರು. ಪರಿಸರ ಸಮತೋಲನ ಕಾಪಾಡಲು ಅರಣ್ಯ ಸಂಪತ್ತು ಅವಶ್ಯಕ. ಪರಿಸರ ಇದ್ದರೆ ಮಾತ್ರ ಮನುಕುಲ ಉಳಿಯಲು ಸಾಧ್ಯ. ಮರಗಳು ಸಹಸ್ರಾರು ವರ್ಷಗಳ ಕಾಲ ನಮಗೆ ಆಮ್ಲಜನಕವನ್ನು ನೀಡಿ ಇಂಗಾಲದ ಡೈ ಆಕ್ಸೈಡ್ ಅನ್ನು ಹೀರಿ ವಾಯು ಮಾಲಿನ್ಯವನ್ನು ತಡೆಗಟ್ಟುತ್ತದೆ ಎಂದು ತಿಳಿಸಿದರು. ಸರ್ಕಾರಿ ಹುದ್ದೆಯಿಂದ ನಿವೃತ್ತಿಯಾದ ನಂತರ 22 ಎಕರೆ ಬಂಜರು ಭೂಮಿಯಲ್ಲಿ ಸುಮಾರು 50 ಸಾವಿರ ಮರಗಳನ್ನು ಬೆಳೆಸಲಾಗಿದೆ. ಪರಿಸರದೊಂದಿಗೆ ತಮ್ಮ ಜೀವನ ಸಾಗಿದೆ. ಮುಂದಿನ ದಿನಗಳಲ್ಲಿಯೂ ಮತ್ತಷ್ಟು ಮರಗಳನ್ನು ಬೆಳೆಸುವ ಯೋಜನೆ ತಮ್ಮದಾಗಿದೆ ಎಂದರು. ಲಲಿತಾ ಸಹಸ್ರನಾಮ ಮತ್ತು ಸೌಂದರ್ಯ ಲಹರಿಯನ್ನು ಸಹಸ್ರಾರು ಮಹಿಳೆಯರಿಗೆ ಕಲಿಸುತ್ತಿರುವ ಆಶಾ ಆರ್. ಕುಮಾರ್ ಅವರಿಗೆ ಶ್ರೀ ಲಲಿತಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಅರ್ಜಿ ಆಹ್ವಾನ

ಮಡಿಕೇರಿ–ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ನೀಡಲಾಗುತ್ತಿದೆ. ಈ ಪ್ರಯುಕ್ತ 2025ನೇ ಸಾಲಿನಲ್ಲೂ ಸಹ ಪ್ರಶಸ್ತಿಗಳನ್ನು ನೀಡಲು ಅರ್ಜಿ ಅಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08272 295829 ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಡಿಕೇರಿ – ಪ್ರಸಕ್ತ (2025-26) ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆ ಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ" ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಇಲಾಖಾ ಸಹಾಯವಾಣಿ ಸಂಖ್ಯೆ: 8050770005, ದೂ.ಸಂ.08272-295628ನ್ನು ಸಂಪರ್ಕಿಸಬಹುದು.

# 'ಜಿಲ್ಲಾ ಪ್ರಶಸ್ತಿ'ಗೆ ಅರ್ಜಿ ಆಹ್ವಾನ

ಮಂಗಳೂರು – 2025-26ನೇ ಸಾಲಿನ "ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಆಚರಣೆಯ ಸಂದರ್ಭದಲ್ಲಿ ನೀಡುವ "ಜಿಲ್ಲಾ ಪ್ರಶಸ್ತಿ"ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಹಾಗೂ ಅನುಪಮ ಸೇವೆ ಸಾಧನೆಗೈದ ವ್ಯಕ್ತಿಗಳನ್ನು ಗುರುತಿಸಿ "ಜಿಲ್ಲಾ ಪ್ರಶಸ್ತಿ"ಯನ್ನು ನವೆಂಬರ್ 1 ರಂದು ಆಚರಿಸಲಾಗುವ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ನೀಡಿ ಗೌರವಿಸುವ ಪದ್ಧತಿ ಜಿಲ್ಲಾಡಳಿತದಿಂದ ಇರುತ್ತದೆ.

# ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ : ಅರ್ಜಿ ಆಹ್ವಾನ

ಮಂಗಳೂರು – ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ 2025-26ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯವಾಣಿ: 94808 43114 ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಯೋಜನೆಗಳಿಗೆ ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ : ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಸುವಿಧಾ ಯೋಜನೆಯಡಿ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ, ಶಿಶುಪಾಲನ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿಕ ದ್ವಿಚಕ್ರವಾಹನ ಯೋಜನೆ, ಶ್ರವಣ ದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ ಹಾಗೂ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿಚಾಲಿತ ವ್ಹೀಲ್‌ಚೇರ್ ಯೋಜನೆಗಳನ್ನು ಡಿ.ಬಿ.ಟಿ ತಂತ್ರಾಂಶದ news 2 ಮೂಲಕ ಪಡೆಯಲು ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ ಹಾಗೂ ವಿಳಾಸಕ್ಕೆ ಸಂಪರ್ಕಿಸಬಹುದು ಎಂದು ಇಲಾಖೆಯು ಪ್ರಕಟಣೆಯಲ್ಲಿ ತಿಳಿಸಿದೆ.

# ಬೆಂಬಲ ಬೆಲೆಯಡಿ ಭತ್ತ ಖರೀದಿ

ಶಿವಮೊಗ್ಗ : 2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಕೇಂದ್ರ ಸರ್ಕಾರವು ಭತ್ತವನ್ನು ಖರೀದಿಸಲು ಮುಂದಾಗಿದ್ದು, ಸಾಮಾನ್ಯ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.2369 ಹಾಗೂ ಗ್ರೇಡ್ ಎ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ. 2389 ದರವನ್ನು ನಿಗದಿಪಡಿಸಲಾಗಿದೆ.

# ಎಂ.ಎಫ್.ಸಿ. ಮುಡಿಗೇರಿದ ಕುಡ್ಲದ ಪಿಲಿ ಪರ್ಬ – 2025ರ ಕಿರೀಟ




ಮಂಗಳೂರು : ನಳಿನ್ ಕುಮಾರ್ ಕಟೀಲ್ ಮಾರ್ಗದರ್ಶನ ಹಾಗೂ ಶಾಸಕ ಡಿ.ವೇದವ್ಯಾಸ ಕಾಮತ್‌ರವರ ನೇತೃತ್ವದ ಕುಡ್ಲ ಸಾಂಸ್ಕೃತಿಕ ಪ್ರತಿಷ್ಠಾನದಡಿ ಕೇಂದ್ರ ಮೈದಾನದಲ್ಲಿ ಅದ್ದೂರಿಯಾಗಿ ನಡೆದ ಕುಡ್ಲದ ಪಿಲಿಪರ್ಬ-2025 ಸೀಸನ್-4 ಮುಕ್ತಾಯಗೊಂಡಿದ್ದು,10 ತಂಡಗಳ ನಡುವಿನ ಜಿದ್ದಾಜಿದ್ದಿನ ಸ್ಪರ್ಧಾಕೂಟದಲ್ಲಿ ಅಂತಿಮವಾಗಿ ಮುಳಿಹಿತ್ಲು ಫ್ರೆಂಡ್ಸ್ ಸರ್ಕಲ್ (ಎಂ.ಎಫ್.ಸಿ) ತಂಡವು ಪ್ರತಿಷ್ಠಿತ ಪಿಲಿಪರ್ಬ– 2025ರ ಕಿರೀಟ ಮುಡಿಗೇರಿಸಿಕೊಂಡಿತು. ದ್ವಿತೀಯ ಸ್ಥಾನದ ಪ್ರಶಸ್ತಿಯನ್ನು ನಂದಿಗುಡ್ಡ ಫ್ರೆಂಡ್ಸ್ ಬಾಬುಗುಡ್ಡ ತಂಡವು ಪಡೆದುಕೊಂಡರೆ, ತೃತೀಯ ಸ್ಥಾನವನ್ನು ಕಾರ್ಕಳ ಟೈಗರ್ಸ್ ಬೋಳ ಪ್ರಶಾಂತ್ ಕಾಮತ್ ಅಭಿಮಾನಿ ಬಳಗ ತಂಡ ಅಲಂಕರಿಸಿದವು. ಪಿಲಿಪರ್ಬದ ವಿಶೇಷ ಬಹುಮಾನಗಳಾದ "ಕಪ್ಪು ಪಿಲಿ" ಪ್ರಶಸ್ತಿಯನ್ನು ಟ್ಯಾಲೆಂಟ್ಸ್ ಟೈಗರ್ಸ್ ತುಳುನಾಡ್ ತಂಡ ಪಡೆದುಕೊಂಡರೆ, "ಮರಿ ಹುಲಿ" ಹಾಗೂ ಬಹುನಿರೀಕ್ಷಿತ ಪ್ರಶಸ್ತಿಯಾದ "ಪರ್ಬದ ಪಿಲಿ"ಯನ್ನು ಪ್ರಥಮ ಸ್ಥಾನ ವಿಜೇತ ತಂಡ ಮುಳಿಹಿತ್ಲು ಫ್ರೆಂಡ್ಸ್ ಸರ್ಕಲ್ (ಎಂ.ಎಫ್.ಸಿ) ಪಡೆದುಕೊಂಡಿತು. ಶಿಸ್ತಿನ ತಂಡವಾಗಿ ಟೀಮ್ ಪರಶುರಾಮ್ ಹೊರಹೊಮ್ಮಿದರೆ, ಬಣ್ಣಗಾರಿಕೆ ಹಾಗೂ ತಾಸೆ ಹಿಮ್ಮೇಳ ವಿಭಾಗದಲ್ಲಿ ಪುರಲ್ದಪ್ಪೆನ ಮೋಕೆದ ಜೋಕುಲು ಪೊಳಲಿ ಟೈಗರ್ಸ್, ಹಾಗೂ ಮೆರವಣಿಗೆ ವಿಭಾಗದಲ್ಲಿ ಶಿವಶಕ್ತಿ ಟೈಗರ್ಸ್ ಕುಂಜತ್ತೂರು ಮಂಜೇಶ್ವರ, ಮುಡಿ ವಿಭಾಗದಲ್ಲಿ ನಂದಿಗುಡ್ಡ ಫ್ರೆಂಡ್ಸ್ ಬಾಬುಗುಡ್ಡ ಪ್ರಶಸ್ತಿ ಪಡೆದುಕೊಂಡರೆ, ಧರಣಿ ಮಂಡಲ ಪ್ರಶಸ್ತಿಯನ್ನು ಲೆಜೆಂಡ್ಸ್ ಟೈಗರ್ಸ್ ಕುಡ್ಲ ಬಾಚಿಕೊಂಡಿತು. ಕೊನೆಯದಾಗಿ ಭಾಗವಹಿಸಿದ ಎಲ್ಲಾ ತಂಡಗಳಿಗೂ ಪ್ರೋತ್ಸಾಹ ಧನ ನೀಡಿ ಗೌರವಿಸುವ ಮೂಲಕ ನಾಲ್ಕನೇ ಆವೃತ್ತಿಯ ಪಿಲಿ ಪರ್ಬಕ್ಕೆ ತೆರೆ ಬಿದ್ದಿತು.

# ಕಾಮಗಾರಿ ಅಪೂರ್ಣ : ಕಾಂಗ್ರೆಸ್‌ನಿಂದ ಪ್ರತಿಭಟನೆ



ಮಂಗಳೂರು : ಜೆಪ್ಪು ಮಹಾಕಾಳಿಪಡ್ಪು ಅಂಡರ್‌ಬ್ರಿಜ್ಡ್ ಕಾಮಗಾರಿ ಪೂರ್ಣಗೊಳ್ಳದೇ ಉಂಟಾಗಿರುವ ತೊಂದರೆಯ ಬಗ್ಗೆ ಮಂಗಳೂರು ದಕ್ಷಿಣ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ರೈಲ್ವೆ ಇಲಾಖೆಯ ನಿಧಾನಗತಿಯ ಕಾಮಗಾರಿಯನ್ನು ಖಂಡಿಸಿ ಪ್ರತಿಭಟನೆ ನಡೆಸಲಾಯಿತು. ಕಳೆದ 4 ವರ್ಷಗಳ ಹಿಂದೆ ಜೆಪ್ಪು ಮಹಾಕಾಳಿಪಡ್ಪು ಅಂಡರ್‌ಬ್ರಿಡ್ಜ್ ಕಾಮಗಾರಿ ಪೂರ್ಣಗೊಂಡಿದ್ದರೂ, ಇನ್ನು ಅದನ್ನು ಸಾರ್ವಜನಿಕರಿಗೆ ಬಿಟ್ಟುಕೊಡದೇ ಇದ್ದು ಇಲ್ಲಿ ನೀರು ತುಂಬಿ ಅವೈಜ್ಞಾನಿಕವಾಗಿ ಕಾಮಗಾರಿ ನಡೆಸಿದ ಬಗ್ಗೆ ದೂರುಗಳು ಇದ್ದರೂ ರೈಲ್ವೆ ಇಲಾಖೆಯವರು ಸಾರ್ವಜನಿಕ ಉಪಯೋಗಕ್ಕೆ ಬಿಟ್ಟುಕೊಡದೇ ಇರುವುದನ್ನು ಖಂಡಿಸಿ ಮಂಗಳೂರು ದಕ್ಷಿಣ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಮಹಾಕಾಳಿ ಪಡ್ಪು ಜೆಪ್ಪು ಪಟ್ಣದ ಕೆನರಾ ಪಿಂಟೋ ಗ್ಯಾರೇಜ್ ಬಳಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಪ್ರತಿಭಟನೆಯಲ್ಲಿ ದಕ್ಷಿಣ ಬ್ಲಾಕ್ ಕಾಂಗ್ರೆಸ್ ವಾರ್ಡ್ ಅಧ್ಯಕ್ಷರು, ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು ಮಹಿಳಾ ಪದಾಧಿಕಾರಿಗಳು, ನಿಕಟ ಪೂರ್ವ ಕಾರ್ಪೊರೇಟರ್ಗಳು ಎಲ್ಲಾ ಕಾಂಗ್ರೆಸ್ನ ಸಹಸಂಘಟನೆಗಳು ಭಾಗವಹಿಸಿದ್ದರು. ಈ ಬ್ರಿಡ್ಜ್ ಚಾಲನೆ ಅಗಿದ್ದಲ್ಲಿ ಕೇರಳ ಹಾಗೂ ಉಳ್ಳಾಲ ಕಡೆಯಿಂದ ಬರುವ ಎಲ್ಲಾ ವಾಹನಗಳು ಮಂಗಳೂರು ನಗರಕ್ಕೆ ಸುಗಮವಾಗಿ ಬರಲು ಇದೊಂದೆ ದಾರಿ ಇದ್ದು ಇದನ್ನು ಕಳೆದ ನಾಲ್ಕು ವರ್ಷಗಳಿಂದ ಅಂಡರ್‌ಬ್ರಿಡ್ಜ್ನ ಕಾಮಗಾರಿಯು ಅಮೆಗತಿಯಲ್ಲಿ ನಡೆಯುತ್ತಿದ್ದು ಇದನ್ನು ಯಾವುದೇ ರೀತಿಯಲ್ಲಿ ಗಮನವಹಿಸದೇ ಇರುವುದನ್ನು ಕಂಡು ಬ್ಲಾಕ್ ಕಾಂಗ್ರೆಸ್ ವತಿಯಿಂದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಐವನ್ ಡಿ'ಸೋಜಾ ತಿಳಿಸಿದ್ದಾರೆ.

# ಬಜಿಲಕೇರಿ ಕಮಲಾಕ್ಷರಿಗೆ ತುಳು ಅಕಾಡೆಮಿ ಚಾವಡಿ ತಮ್ಮನ



ಮಂಗಳೂರು: ತುಳುನಾಡಿನ ಹಿರಿಯ ಹುಲಿ ವೇಷ ಕಲಾವಿದ ಹಾಗೂ ಸಂಘಟಕ ಬಜಲಕೇರಿ ಕಮಲಾಕ್ಷ ಅವರಿಗೆ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಚಾವಡಿ ತಮ್ಮನ ಪ್ರಧಾನ ಮಾಡಿ ಸೋಮವಾರ ಗೌರವಿಸಲಾಯಿತು. ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಆಯೋಜಿಸಿದ ಈ ಕಾರ್ಯಕ್ರಮ ಮಂಗಳೂರು ನಗರದ ಮಣ್ಣಗುಡ್ಡೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹಭಾಗಿತ್ವದಲ್ಲಿ ನಡೆಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಬಜಿಲಕೇರಿ ಕಮಲಾಕ್ಷ ಅವರು, ನನ್ನ ತಂದೆಯ ಕಾಲದಿಂದ ಹುಲಿವೇಷವನ್ನು ಸಾಂಪ್ರದಾಯಿಕವಾಗಿ ಹಾಗೂ ನಿಷ್ಠೆಯಿಂದ ಮಾಡಿಕೊಂಡು ಬಂದಿರುವುದಾಗಿ ತಿಳಿಸಿದರು. ಹಿಂದಿನ ಕಾಲದಲ್ಲಿ ಕಡಿಮೆ ವೆಚ್ಚದಲ್ಲಿ ವೇಷ ನಡೆಯುತ್ತಿತ್ತು, ಈಗ ತುಂಬಾ ದುಬಾರಿಯಾಗಿದೆ ಎಂದರು. ಹಿಂದೆ ಊದು ಪೂಜೆ ಎಂಬ ಸಂಪ್ರದಾಯ ಇರಲಿಲ್ಲ, ಈಗ ಕೆಲವೆಲ್ಲ ವಿಚಾರಗಳು ಬದಲಾಗಿದೆ, ಹುಲಿ ವೇಷಧಾರಿಗಳ ಮೈ ಮೇಲೆ ದೈವ ಅಥವಾ ಬೇರೆ ಯಾವುದೇ ಶಕ್ತಿಗಳು ಬರುವುದು ಸಾಧ್ಯವೇ ಇಲ್ಲ ಎಂದು ಕಮಲಾಕ್ಷ ಅವರು ಖಡಾ ಖಂಡಿತವಾಗಿ ಹೇಳಿದರು. ತುಳು ಅಕಾಡೆಮಿಯ ಚಾವಡಿ ತಮ್ಮನದ ಗೌರವ ಅತೀವ ಖುಷಿ ಕೊಟ್ಟಿದೆ ಎಂದು ಕಮಲಾಕ್ಷ ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ತಾರಾನಾಥ ಗಟ್ಟಿ ಕಾಪಿಕಾಡ್ ಮಾತನಾಡಿ, ತುಳು ನಾಡಿನ ಜಾನಪದ ಲೋಕದಲ್ಲಿ ಹುಲಿ ವೇಷ ಕುಣಿತ ಮಹತ್ವವಾದದ್ದು, ಹುಲಿ ಕುಣಿತಕ್ಕೆ ಬಜಿಲಕೇರಿ ಕಮಲಾಕ್ಷ ಅವರು ನೀಡಿರುವ ಸೇವೆಗೆ ಅವರ ಊರಿನ ಜನರ ಸಮ್ಮುಖದಲ್ಲಿ ಚಾವಡಿ ತಮ್ಮನದ ಮೂಲಕ ಸನ್ಮಾನಿಸಿರುವುದು ಹುಲಿವೇಷ ಕಲೆಯ ಬಗ್ಗೆ ಹಾಗೂ ಕಲಾವಿದರ ಬಗೆಗಿನ ಗೌರವದ ದ್ಯೋತಕವಾಗಿದೆ ಎಂದರು.

# ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರಕ್ಕೆ ಡಿ.ಸಿ.ಎಂ. ಭೇಟಿ



ಮಂಗಳೂರು: ರಾಜ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರಕ್ಕೆ ಭೇಟಿ ನೀಡಿ ಮಂಗಳೂರು ದಸರಾ ವೈಭವಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ದೇವರ ಬಲಿ ಉತ್ಸವದ ಶುಭ ಸಂಧರ್ಭದಲ್ಲಿ ದೇವಸ್ಥಾನ ಪ್ರವೇಶಿಸಿದ ಉಪಮುಖ್ಯಮಂತ್ರಿ, ಸಂಪ್ರದಾಯದಂತೆ ದೇವರ ರಥಾರೋಹಣ ನಂತರ ರಥದ ಚಕ್ರಕ್ಕೆ ತೆಂಗಿನಕಾಯಿ ಒಡೆದು, ಭಕ್ತರೊಂದಿಗೆ ರಥೋತ್ಸವದಲ್ಲಿ ಭಾಗಿಯಾದರು. ದೇವಳ ಸ್ಥಾಪಿಸಿದ ಸಂತ ಬ್ರಹ್ಮಶ್ರೀ ನಾರಾಯಣ ಗುರುಗಳ ಸನ್ನಿಧಿಗೆ ನಮಿಸಿ, ಸರ್ವ ದೇವರ ದರ್ಶನ ಪಡೆದು, ದರ್ಬಾರ್ ಮಂಟಪದಲ್ಲಿ ಶಾರದೆ ಮತ್ತು ನವದುರ್ಗೆಯರಿಗೆ ವಂದಿಸಿದರು. ಈ ವೇಳೆ ಉಪಮುಖ್ಯಮಂತ್ರಿಗೆ ಪ್ರಸಾದ ನೀಡಿ, ದೇವಳದ ವತಿಯಿಂದ ಗೌರವಿಸಲಾಯಿತು. ಬಳಿಕ ಮಾತನಾಡಿದ ಅವರು, ನಾನು ಇಂದು ಇಲ್ಲಿಗೆ ಬರಲು ಸಾಧ್ಯವಾಗುತ್ತಿರಲಿಲ್ಲ. ಆದರೆ, ಸಾಕ್ಷಾತ್ ಶಾರದಾ ಮಾತೆಯೇ ನನ್ನನ್ನು ಇಲ್ಲಿಗೆ ಕರೆಸಿಕೊಂಡಂತಿದೆ. ಶ್ರೀ ನಾರಾಯಣ ಗುರು ಸ್ಥಾಪಿಸಿದ ಈ ಪುಣ್ಯಕ್ಷೇತ್ರಕ್ಕೆ ಭೇಟಿ ನೀಡಿರುವುದು ನನ್ನ ಸೌಭಾಗ್ಯ ಮಂಗಳೂರು ದಸರಾ ವೈಭವ ಕಂಡು ಬಹಳ ಸಂತೋಷವಾಯಿತು ಎಂದರು. ದೇವಸ್ಥಾನದ ಕೋಶಾಧಿಕಾರಿ ಪದ್ಮರಾಜ್ ಆರ್. ಪೂಜಾರಿ, ಟ್ರಸ್ಟಿಗಳಾದ ಸಂತೋಷ್ ಪೂಜಾರಿ, ಕೃತಿನ್ ಅಮೀನ್, ಕಿಶೋರ್ ದಂಡಕೇರಿ, ಅಭಿವೃದ್ಧಿ ಸಮಿತಿಯ ಅಧ್ಯಕ್ಷ ದೇವೇಂದ್ರ ಪೂಜಾರಿ, ಸದಸ್ಯರಾದ ಮೆಸ್ಕಾಂ ಅಧ್ಯಕ್ಷ ಹರೀಶ್ ಕುಮಾರ್, ಪಿ.ಕೆ.ಗೌರವಿ, ದೀಪಕ್ ಪೂಜಾರಿ ಹಾಗೂ ಸಮಿತಿ ಸದಸ್ಯರು, ಶಾಸಕರಾದ ಅಶೋಕ್ ಕುಮಾರ್ ರೈ, ಎಂ.ಎಲ್.ಸಿ. ಮಂಜುನಾಥ ಭಂಡಾರಿ, ರಕ್ಷಿತ್ ಶಿವರಾಂ ಬೆಳ್ತಂಗಡಿ, ಇನಾಯತ್ ಅಲಿ, ಶ್ರೀನಿವಾಸ್ ಬಿ.ವಿ., ದೇವಳದ ಆಡಳಿತ ಹಾಗೂ ಅಭಿವೃದ್ಧಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ರೋಹನ್ ಕಾರ್ಪೊರೇಶನ್‌ನಿಂದ ಪೌರ ಕಾರ್ಮಿಕರಿಗೆ ಸುರಕ್ಷತಾ ಪಾದರಕ್ಷೆಗಳ ವಿತರಣೆ



ಮಂಗಳೂರು: ಮಂಗಳೂರಿನ ಪ್ರತಿಷ್ಠಿತ ರಿಯಲ್ ಎಸ್ಟೇಟ್ ಕಂಪನಿ ರೋಹನ್ ಕಾರ್ಪೊರೇಶನ್ ಪೌರ ಕಾರ್ಮಿಕರ ಆರೋಗ್ಯ ಮತ್ತು ಸುರಕ್ಷತೆಯನ್ನು ಕಾಳಜಿ ವಹಿಸುವ ಉದ್ದೇಶದಿಂದ, ಸೆಪ್ಟೆಂಬರ್ 29 ರಂದು ಮಂಗಳೂರು ಮಹಾನಗರ ಪಾಲಿಕೆಗೆ 100 ಜೋಡಿ ಸುರಕ್ಷತಾ ಪಾದರಕ್ಷೆಗಳನ್ನು ವಿತರಣೆ ಮಾಡುವ ಮೂಲಕ ಸಾಮಾಜಿಕ ಕಾರ್ಯವನ್ನು ಹಮ್ಮಿಕೊಂಡಿತು.ಈ ಕಾರ್ಯಕ್ರಮವು ಮಂಗಳೂರು ಮಹಾನಗರ ಪಾಲಿಕೆ ಆಯುಕ್ತರ ಕಚೇರಿಯಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಮಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀರವಿಚಂದ್ರ ನಾಯಕ್ ಉಪಸ್ಥಿತರಿದ್ದರು. ರೋಹನ್ ಕಾರ್ಪೊರೇಶನ್ ಮಾರ್ಕೆಟಿಂಗ್ ಮ್ಯಾನೇಜರ್ ಮಾಕ್ಷಿಮ್ ಲೋಬೊ ಕಾರ್ಮಿಕರಿಗೆ ಪಾದರಕ್ಷೆಗಳನ್ನು ಹಸ್ತಾಂತರಿಸಿದರು. "ಪೌರ ಕಾರ್ಮಿಕರು ನಮ್ಮ ಸಮಾಜದ ಬೆನ್ನೆಲುಬು. ಅವರ ಶ್ರಮದಿಂದಲೇ ನಗರ ಸ್ವಚ್ಛವಾಗಿರುತ್ತದೆ. ಅವರ ಸುರಕ್ಷತೆಗಾಗಿ ನಾವು ಕೈಗೊಂಡಿರುವ ಈ ಉಪಕ್ರಮ ನಮ್ಮ ಸಾಮಾಜಿಕ ಜವಾಬ್ದಾರಿಯ ಭಾಗವಾಗಿದೆ" ಎಂದು ರೋಹನ್ ಕಾರ್ಪೊರೇಶನ್ ಮಾರ್ಕೆಟಿಂಗ್ ಮ್ಯಾನೇಜರ್ ಮಾಕ್ಷಿಮ್ ಲೋಬೊ ಹೇಳಿದರು. ಮಹಾ ನಗರ ಪಾಲಿಕೆ ಆಯುಕ್ತರು ಈ ಸಂದರ್ಭದಲ್ಲಿ, ಪೌರ ಕಾರ್ಮಿಕರ ಸುರಕ್ಷತೆಯ ಕಡೆ ಗಮನ ಹರಿಸಿರುವ ರೋಹನ್ ಕಾರ್ಪೊರೇಶನ್‌ನ ಸಮಾಜಮುಖಿ ಕಾರ್ಯವನ್ನು ಮೆಚ್ಚಿ, ಮುಂದೆಯೂ ಇಂತಹ ಸಮಾಜಮುಖಿ ಕಾರ್ಯಗಳು ನಡೆಯಲಿ ಎಂದರು.

# ಸಮಾಜಮುಖಿ ಸೇವಾ ಕಾರ್ಯಗಳು ಸದ್ಯದಲ್ಲೆ ಪ್ರಾರಂಭ : ವೀರೇಂದ್ರ ಹೆಗ್ಗಡೆ





ಉಜಿರೆ: ಧರ್ಮಸ್ಥಳದ ವತಿಯಿಂದ ಸದ್ಯದಲ್ಲೆ ಹಲವು ಸಮಾಜಮುಖಿ ಸೇವಾಕಾರ್ಯಗಳನ್ನು ಎಲ್ಲರ ಕಲ್ಯಾಣಕ್ಕಾಗಿ ಸದ್ಯದಲ್ಲೆ ಪ್ರಾರಂಭಿಸಲಾಗುವುದು ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಪ್ರಕಟಿಸಿದರು. ಧರ್ಮಸ್ಥಳದ ಅಮೃತವರ್ಷಿಣಿ ಸಭಾಭವನದಲ್ಲಿ ಬೆಳ್ತಂಗಡಿ ತಾಲ್ಲೂಕಿನ ಎಲ್ಲಾ 81 ಗ್ರಾಮಗಳ ಗ್ರಾಮಸ್ಥರು ಸೇರಿ ಆಯೋಜಿಸಿದ ಸತ್ಯದರ್ಶನ ಸಮಾವೇಶದಲ್ಲಿ ಮಾತನಾಡಿ, ಚಿನ್ನವನ್ನು ಬೆಂಕಿಗೆ ಹಾಕಿದರೆ ಅದು ಮತ್ತಷ್ಟು ಸ್ಪುಟಗೊಂಡು ಪರಿಶುದ್ಧವಾಗಿ ಹೊಳೆಯುತ್ತದೆ. ಅದೇ ರೀತಿ ಧರ್ಮಸ್ಥಳದ ಬಗ್ಗೆ ಷಡ್ಯಂತ್ರದಿಂದ ಸುಳ್ಳು ವದಂತಿ ಪಸರಿಸಿ ಅಪಚಾರ ಮಾಡಿದರೂ, ಷಡ್ಯಂತ್ರದ ಚಿದಂಬರ ರಹಸ್ಯ ಬಯಲಾಗಿ, ಪವಿತ್ರಕ್ಷೇತ್ರ ಇನ್ನಷ್ಟು ಬೆಳಗುತ್ತಿದೆ, ಬೆಳೆಯುತ್ತಿದೆ. ಈಗ ಇಲ್ಲಿಗೆ ಬರುವ ಭಕ್ತರು ಮತ್ತು ಅಭಿಮಾನಿಗಳ ಸಂಖ್ಯೆಯೂ ಹೆಚ್ಚಾಗಿದೆ. ಎಲ್ಲಾ ಭಕ್ತರು ಶ್ರದ್ಧಾ-ಭಕ್ತಿಯಿಂದ ಬಂದು ಸೇವೆ ಮಾಡುತ್ತಿದ್ದಾರೆ. ಸರ್ಕಾರ ರಚಿಸಿದ ವಿಶೇಷ ತನಿಖಾ ದಳ (ಎಸ್.ಐ.ಟಿ)ದಿಂದ ಸತ್ಯದ ಅನಾವರಣವಾಗಿದ್ದು, ನಾವು ನಿರಾಳವಾಗಿದ್ದೇವೆ. ಆರಂಭದಲ್ಲೆ ಎಸ್.ಐ.ಟಿ. ರಚನೆಯನ್ನು ನಾನು ಸ್ವಾಗತಿಸಿ, ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದ್ದೆ. ಈಗಲೂ ಮತ್ತೊಮ್ಮೆ ಸರ್ಕಾರ ಮತ್ತು ಎಸ್.ಐ.ಟಿ.ಯನ್ನು ಅಭಿನಂದಿಸುವುದಾಗಿ ಹೆಗ್ಗಡೆ ತಿಳಿಸಿದರು.

# ಕುದ್ರೋಳಿ ಕ್ಷೇತ್ರದ ಕಾಳಭೈರವನಿಗೆ ಬೆಳ್ಳಿ ಪ್ರಭಾವಳಿ ಸಮರ್ಪಣೆ



ಮಂಗಳೂರು: ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದ ಶ್ರೀ ಕಾಳಭೈರವ ದೇವರಿಗೆ ಕುದ್ರೋಳಿ ಕ್ಷೇತ್ರದ ಸ್ಥಾಪಕ ಅಧ್ಯಕ್ಷರಾದ ಸಾವ್‌ಕಾರ್ ಕೊರಗಪ್ಪರವರ ಪುತ್ರ ದಿ.ಸೋಮಸುಂದರಂ ಕುಟುಂಬಸ್ಥರು ಸುಮಾರು 9 ಲಕ್ಷ ರೂಪಾಯಿ ವೆಚ್ಚದಲ್ಲಿ 6 ಕೆ.ಜಿ. ತೂಕ ಬೆಳ್ಳಿಯ ಪ್ರಭಾವಳಿಯನ್ನು ಕೊಡುಗೆಯಾಗಿ ನೀಡಿದ್ದು, ಶುಕ್ರವಾರ ಸಮರ್ಪಿಸಲಾಯಿತು. ದಿ.ಸೋಮಸುಂದರಂರವರು ಸುಮಾರು 34 ವರ್ಷ ಕ್ಷೇತ್ರದಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಪ್ರಸ್ತುತ ಅವರ ಕಿರಿಯ ಪುತ್ರ ಜೈರಾಜ್ ಎಚ್.ಸೋಮಸುಂದರಂ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಕ್ಷೇತ್ರದ ಅಧ್ಯಕ್ಷ ಜೈರಾಜ್ ಎಚ್.ಸೋಮಸುಂದರಂ, ಕಾರ್ಯದರ್ಶಿ ಮಾಧವ ಸುವರ್ಣ, ಕೋಶಾಧಿಕಾರಿ ಪದ್ಮರಾಜ್ ಆರ್.ಪೂಜಾರಿ, ಟ್ರಸ್ಟಿಗಳಾದ ಸಂತೋಷ್ ಜೆ.ಪೂಜಾರಿ, ಕಿಶೋರ್ ದಂಡೆಕೇರಿ, ಅಭಿವೃದ್ಧಿ ಸಮಿತಿ ಅಧ್ಯಕ್ಷ ದೇವೇಂದ್ರ ಪೂಜಾರಿ, ಉಪಾಧ್ಯಕ್ಷ ಬಿ.ಜಿ.ಸುವರ್ಣ, ಸದಸ್ಯರಾದ ಗೌರವಿ ರಾಜಶೇಖರ್, ಲತೀಶ್ ಸುವರ್ಣ, ಭಕ್ತರು ಪಾಲ್ಗೊಂಡಿದ್ದರು.

# ಕ್ಷೇತ್ರದ ಮೇಲೆ ಸತತವಾಗಿ ಆರೋಪ, ಕಾರಣವೇನು ತಿಳಿದಿಲ್ಲ–ವೀರೇಂದ್ರ ಹೆಗ್ಗಡೆ



ಧರ್ಮಸ್ಥಳ: ಕೆಲವು ಸಮಯಗಳಿಂದ ಕ್ಷೇತ್ರದ ಮೇಲೆ ಸತತವಾಗಿ ಆರೋಪಗಳು, ದ್ವೇಷಗಳು ಬರತೊಡಗಿತು. ಅದಕ್ಕೆ ಕಾರಣವೇನು ಎಂದು ನನಗೆ ಇದುವರೆಗೂ ತಿಳಿದಿಲ್ಲ ಎಂದು ಡಾ. ವೀರೇಂದ್ರ ಹೆಗ್ಗಡೆಯವರು ಹೇಳಿದರು. ಅವರು ಹಿತರಕ್ಷಣಾ ಸಮಿತಿ ಮತ್ತು ಧರ್ಮಸ್ಥಳ ಭಕ್ತರಿಂದ ಕ್ಷೇತ್ರದಲ್ಲಿ ನಡೆದ ವಿಶೇಷ ಪ್ರಾರ್ಥನೆಯ ನಂತರ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಡಾ. ಡಿ. ವೀರೇಂದ್ರ ಹೆಗ್ಗಡೆಯವರು "ಊರವರ, ಕ್ಷೇತ್ರದ ಭಕ್ತರೆಲ್ಲರ ಪ್ರೀತಿ ವಿಶ್ವಾಸಗಳು ನಮ್ಮನ್ನು ಜೀವಂತವಾಗಿರಿಸಿದೆ. ಇದರಿಂದಾಗಿ ಇನ್ನೂ ಹೆಚ್ಚು-ಹೆಚ್ಚು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸೇವೆ ಮಾಡಬೇಕೆಂಬ ಚೈತನ್ಯ ಮೂಡುತ್ತಿದೆ. ಕೆಲವು ಸಮಯಗಳಿಂದ ಕ್ಷೇತ್ರದ ಮೇಲೆ ಸತತವಾಗಿ ಆರೋಪಗಳು, ದ್ವೇಷಗಳು ಬರತೊಡಗಿತು. ಅದಕ್ಕೆ ಕಾರಣವೇನು ಎಂದು ನನಗೆ ಇದುವರೆಗೂ ತಿಳಿದಿಲ್ಲ. ಈಗ ಸರಕಾರ ನಡೆಸುತ್ತಿರುವ ತನಿಖೆಯಲ್ಲಿ ಸತ್ಯಗಳು ಹೊರ ಬರುತ್ತಿವೆ. ನಮ್ಮಿಂದ ಯಾವ ತಪ್ಪುಗಳು ನಡೆದಿಲ್ಲ ಎಂದು ತಿಳಿಯುತ್ತಿದೆ ಎಂದು ಹೇಳಿದರು. ಇದುವರೆಗೂ ಅನೇಕರು ಶ್ರೀ ಕ್ಷೇತ್ರಕ್ಕೆ ಆಗಮಿಸಿ ಕ್ಷೇತ್ರದ ಜೊತೆಗೆ ಇದ್ದೇವೆ ಎಂದು ಹೇಳಿದ್ದಾರೆ. ಊರವರೂ ಕೂಡ ಕ್ಷೇತ್ರದ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಾ ಕ್ಷೇತ್ರದ ಕಾರ್ಯಗಳಿಗೆ ಬೆಂಬಲವಾಗಿ ನಿಂತಿದ್ದಾರೆ. ನಿಮ್ಮೆಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಪ್ರೀತಿ, ವಿಶ್ವಾಸಗಳು ಹೀಗೆಯೇ ಇರಲಿ ಎಂದರು.

# ಮೆಸ್ಕಾಂ ನೂತನ ಅಧ್ಯಕ್ಷರಾಗಿ ಕೆ. ಹರೀಶ್ ಕುಮಾರ್ ಅಧಿಕಾರ ಸ್ವೀಕಾರ



ಮಂಗಳೂರು: ಮಂಗಳೂರು ವಿದ್ಯುತ್ ಸರಬರಾಜು ಕಂಪೆನಿ ನಿಯಮಿತ (ಮೆಸ್ಕಾಂ) ನೂತನ ಅಧ್ಯಕ್ಷರಾಗಿ ಕರ್ನಾಟಕ ಸರಕಾರದಿಂದ ನೇಮಕಗೊಂಡಿರುವ ವಿಧಾನಪರಿಷತ್ ಮಾಜಿ ಸದಸ್ಯ ಕೆ. ಹರೀಶ್ ಕುಮಾರ್ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ಮೆಸ್ಕಾಂ ಕಾರ್ಪೊರೇಟ್ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆ. ಹರೀಶ್ ಕುಮಾರ್ ಅವರು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು. ಆ ಬಳಿಕ ಮಾತನಾಡಿದ ಅವರು ಕರ್ನಾಟಕ ಸರಕಾರ ನನ್ನನ್ನು ಪ್ರತಿಷ್ಠಿತ ಮೆಸ್ಕಾಂ ಸಂಸ್ಥೆಯ ಅಧ್ಯಕ್ಷರನ್ನಾಗಿ ಮಾಡಿದ್ದು ಇಂದು ಅಧಿಕಾರ ವಹಿಸಿಕೊ0ಡಿದ್ದೇನೆ. ಇದಕ್ಕಾಗಿ ಪಕ್ಷದ ವರಿಷ್ಠ ನಾಯಕರಿಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಭಾರಿಯಾಗಿದ್ದೇನೆ. ಈ ಪದವಿ ಅಧಿಕಾರಕ್ಕಿಂತಲೂ ಹೆಚ್ಚಾಗಿ ದೊಡ್ಡ ಜವಾಬ್ದಾರಿ ಎಂದು ನಾನು ಭಾವಿಸುತ್ತೇನೆ. ಮೆಸ್ಕಾಂ ಸಂಸ್ಥೆಯ ಉನ್ನತಿಯ ಜತೆಗೆ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವ ಬದ್ದತೆಯ ಧ್ಯೇಯ ನನ್ನದಾಗಿದ್ದು ಈ ಕಾರ್ಯದಲ್ಲಿ ಮೆಸ್ಕಾಂನ ಅಧಿಕಾರಿ,ಸಿಬ್ಬಂದಿ ಸೇರಿದಂತೆ ಎಲ್ಲರ ಸಹಕಾರ ಕೋರುತ್ತೇನೆ ಎಂದರು.

# ಸುದ್ದಿ ತುಣುಕು

ಚೆನಾಬ್, ಪಂಬನ್ ಸೇತುವೆಯಿಂದ ಹಿಡಿದು ಕೊಡಗಿನ ಚಾರಣ ಪಥಗಳವರೆಗೆ ಮೈಸೂರು ದಸರಾ ಜಂಬೂ ಸವಾರಿ ಮೆರವಣಿಗೆಯಲ್ಲಿ ಸ್ತಬ್ಧಚಿತ್ರ ಸಾಗುತ್ತಿದೆ.

ಸಿದ್ದರಾಮಯ್ಯನವರು ಹೈಕಮಾಂಡ್ ಏನು ಹೇಳುತ್ತದೆಯೋ ಅದನ್ನು ನಾವು ಕೇಳುತ್ತೇವೆ ಅಂತ ಅಂದಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಸೂಚ್ಯವಾಗಿ ತಿಳಿಸಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರಿಗೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ನಮನ ಸಲ್ಲಿಸಿದರು.

ರಾಜ್ಯದಲ್ಲಿ ಇನ್ನೆರಡು ವಾರ ಮುಂಗಾರು ಮಳೆ ಇರಲಿದ್ದು, ಬಳಿಕ ಹಿಂಗಾರು ಮಳೆ ಆರಂಭವಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಶಕ್ತಿ ಮತ್ತು ಶ್ರಮವನ್ನು ಕಾಂಗ್ರೆಸ್ ಹೈಕಮಾಂಡ್ ಪರಿಗಣಿಸಿ, ಸೂಕ್ತ ಸ್ಥಾನಮಾನ ನೀಡಬೇಕು ಎಂದು ಕುಣಿಗಲ್ ಕ್ಷೇತ್ರದ ಕಾಂಗ್ರೆಸ್ ಶಾಸಕ ಹೆಚ್.ಡಿ.ರಂಗನಾಥ್ ಒತ್ತಾಯಿಸಿದರು.

ಜೈಲಿನಲ್ಲಿರುವ ಕೈದಿಗಳ ಐಡಿ (ಗುರುತಿನ ಚೀಟಿ)ಗೆ ಆಧಾರ್ ಜೋಡಿಸುವ ಕೇಂದ್ರ ಸರ್ಕಾರದ ಯೋಜನೆಗೆ ರಾಜ್ಯದಲ್ಲಿ ಹಿನ್ನಡೆಯಾಗಿದೆ.

ರಾಜ್ಯ ಸರ್ಕಾರಗಳಿಗೆ ಕೇಂದ್ರ ಸರ್ಕಾರ ಹೆಚ್ಚುವರಿ 1,01,603 ಕೋಟಿ ರೂ. ತೆರಿಗೆ ಪಾಲನ್ನು ಬಿಡುಗಡೆ ಮಾಡಿದೆ.

ಸರ್ಕಾರದಿಂದ ಮಂಜೂರಾದ ಜಮೀನನ್ನು ಪರಿಶಿಷ್ಟ ವರ್ಗದವರು ಎರಡು ಬಾರಿ ಮಾರಾಟ ಮಾಡಿದ ಬಳಿಕವೂ ಪಿಟಿಸಿಎಲ್ ಕಾಯಿದೆ ಅಡಿ ಮತ್ತೆ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದು ಹೈಕೋರ್ಟ್ ತಿಳಿಸಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಚೇತರಿಸಿಕೊಂಡಿದ್ದು, ಒಂದು ವಾರ ಕಾಲ ವಿಶ್ರಾಂತಿ ಪಡೆಯಲಿದ್ದಾರೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಮುಂದಿನ ವರ್ಷಗಳಲ್ಲಿಯೂ ನಾನೇ ದಸರಾ ಉತ್ಸವದಲ್ಲಿ ಪುಷ್ಪಾರ್ಚನೆ ಮಾಡುತ್ತೇನೆಂಬ ಭರವಸೆ ಇದೆ. ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಲು, ಬಜೆಟ್ ಮಂಡಿಸಲು ಸಾಧ್ಯವಿಲ್ಲ ಎಂದು ಹೇಳಿದ್ದರು.

ದೇಶದ ವಿವಿಧ ಮೆಟ್ರೋ ನಗರಗಳಿಗೆ ಹೋಲಿಸಿದರೆ 2023ರಲ್ಲಿ ಹೆಚ್ಚಿನ ಸೈಬರ್ ಅಪರಾಧ ಪ್ರಕರಣಗಳು ಬೆಂಗಳೂರಿನಲ್ಲಿ ದಾಖಲಾಗಿವೆ ಎಂದು ಎನ್‌ಸಿಆರ್‌ಬಿ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.


ದಸರಾ ಹಬ್ಬದ ಅಷ್ಟಮಿ ದಿನದಂದು ಚಪ್ಪನ್ ಭೋಗವನ್ನು ಜಗದಂಬಾ ದೇವಾಲಯದಲ್ಲಿ ದೇವಿಗೆ ನೈವೇದ್ಯ ಮಾಡುವ ಮೂಲಕ ಬಾಗಲಕೋಟೆ ಜನತೆ ಭಕ್ತಿ ಸಮರ್ಪಿಸಿದ್ದಾರೆ. 56 ಬಗೆ ಬಗೆಯ ತಿಂಡಿ ತಿನಿಸುಗಳನ್ನು ಇಟ್ಟು ದೇವಿಗೆ ಆರಾಧನೆ ಮಾಡಿದ್ದಾರೆ.

ಪುರದಾಳ, ಬೇಳೂರು, ಕೌಲಾಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಆನೆ ದಾಳಿಯಿಂದ ಹಾನಿಯಾದ ಬೆಳೆಯನ್ನು ವನ್ಯಜೀವಿ ವಿಭಾಗದ ಡಿಎಫ್‌ಒ ಕಚೇರಿ ಎದುರು ಸುರಿದ ಪ್ರತಿಭಟಿಸಿದರು.

ಬೆಂಗಳೂರು ಜಾಗತಿಕ ನಗರ ಹೀಗಾಗಿ ಎಲ್ಲರೂ ಬೆಂಗಳೂರು ರಸ್ತೆಗುಂಡಿಗಳ ಬಗ್ಗೆ ಮಾತ್ರ ಪ್ರಚಾರ ಮಾಡುತ್ತಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ಈವರೆಗೆ 13 ಸಾವಿರ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ತಿಳಿಸಿದ್ದಾರೆ.

ಆಭರಣ ವ್ಯಾಪಾರಿಗಳಿಗೆ ಕಾರ್ಯನಿರತ ಬಂಡವಾಳ ಸಾಲಗಳನ್ನು ನೀಡುವುದಕ್ಕೆ ಬ್ಯಾಂಕ್‌ಗಳಿಗೆ ಆರ್‌ಬಿಐ ಅನುಮತಿ ನೀಡಿದೆ.

# ಗಣಿಕೆ ಸೊಪ್ಪಿನ ಚಟ್ನಿ



**ಬೇಕಾಗುವ ಸಾಮಾಗ್ರಿ :**
ಗಣಿಕೆ ಸೊಪ್ಪು – 1 ಕಪ್
ಎಲವರಿಗೆ ಸೊಪ್ಪು – 1 ಕಪ್
ಹೊನಗನ್ನೆ ಸೊಪ್ಪು – ಕಪ್
ಜೀರಿಗೆ – 1 1/2 ಚಮಚ
ಮೆಂತೆ – 1/2 ಚಮಚ
ಹುಣಸೆ ಹುಳಿ – ಸ್ವಲ್ಪ
ಕಾಳು ಮೆಣಸಿನ – 5–6
ಬ್ಯಾಡಗಿ ಮೆಣಸು – 5–6
ಕೊಬ್ಬರಿತುರಿ – 1/2 ಕಪ್
ಉಪ್ಪು – ರುಚಿಗೆ ತಕ್ಕಷ್ಟು
ತೆಂಗಿನೆಣ್ಣೆ – 1 ಚಮಚ

**ಮಾಡುವ ವಿಧಾನ :**
ಮೊದಲಿಗೆ ಒಂದು ಬಾಣಲೆ ಬಿಸಿ ಮಾಡಿಕೊಂಡು ಅದಕ್ಕೆ ಗಣಿಕೆ ಸೊಪ್ಪು, ಎಲವರಿಗೆ ಸೊಪ್ಪು ಮತ್ತು ಹೊಗೊನ್ನೆ ಸೊಪ್ಪನ್ನು ಹಾಕಿ ಹುರಿದು ತೆಗೆದಿಟ್ಟುಕೊಳ್ಳಬೇಕು. ನಂತರ ಅದೇ ಬಾಣಲಿಯಲ್ಲಿ ಜೀರಿಗೆ, ಮೆಂತೆ, ಕಾಳು ಮೆಣಸು ಹಾಕಿ ಹುರಿದು ತೆಗೆದಿಟ್ಟುಕೊಂಡು ನಂತರ ಅದೇ ಬಾಣಲೆಗೆ ಸ್ವಲ್ಪ ಎಣ್ಣೆ ಹಾಕಿ ಬ್ಯಾಡಗಿ ಮೆಣಸು ಹುರಿದುಕೊಳ್ಳಬೇಕು. ನಂತರ ಕೊಬ್ಬರಿ ತುರಿ, ಹುಣಸೆಹಣ್ಣು, ಉಪ್ಪು, ಹುರಿದ ಪದಾರ್ಥಗಳನ್ನು ಹಾಕಿ ರುಬ್ಬಿದರೆ ಆರೋಗ್ಯಕರವಾದ ಮತ್ತು ರುಚಿಕರವಾದ ಗಣಿಕೆ ಸೊಪ್ಪಿನ ಚಟ್ನಿ ಸವಿಯಲು ಸಿದ್ದ.

# ಶಟ್ ಡೌನ್ ನೆರಳಲ್ಲಿ ಅಮೇರಿಕ : ಸರ್ಕಾರಿ ಕಾರ್ಯಾಚರಣೆ ಸ್ಥಗಿತ




ವಾಲ್ ಸ್ಟ್ರೀಟ್ : ಯುಎಸ್‌ನಲ್ಲಿ ಶಟ್ ಡೌನ್ ಶುರುವಾಗಿದೆ. ವಾಷಿಂಗ್ಟನ್ ಡಿಸಿಯಲ್ಲಿ ಮಧ್ಯರಾತ್ರಿಯಲ್ಲಿ, ಯುಎಸ್ ಫೆಡರಲ್ ಸರ್ಕಾರವು ಅಧಿಕೃತವಾಗಿ ಕಾರ್ಯಾಚರಣೆಯನ್ನು ನಿಲ್ಲಿಸಿದೆ. ರಿಪಬ್ಲಿಕನ್ ನಿಯಂತ್ರಿತ ಸೆನೆಟ್ ಸರ್ಕಾರಿ ಖರ್ಚು ಮಸೂದೆಯನ್ನು ಅಂಗೀಕರಿಸಲು ವಿಫಲವಾದ ನಂತರ ಈ ಸರ್ಕಾರಿ ಶಟ್ ಡೌನ್ ಆರಂಭವಾಗಿದೆ. 2018ರ ನಂತರ ಮೊದಲ ಬಾರಿಗೆ ಶಟ್‌ಡೌನ್ ಆಗಿದ್ದು, ಅನಿವಾರ್ಯವಲ್ಲದ ಸರ್ಕಾರಿ ನೌಕರರನ್ನು ವೇತನವಿಲ್ಲದೆ ರಜೆಯ ಮೇಲೆ ಕಳುಹಿಸಲಾಗುತ್ತದೆ. ನ.21ರವರೆಗೆ ಸರ್ಕಾರವನ್ನು ಮುಂದುವರೆಸಲು ರಿಪಬ್ಲಿಕನ್ನರು ಅಲ್ಪಾವಧಿ ಯ ಹಣಕಾಸು ಮಸೂದೆಯನ್ನು ಮಂಡಿಸಿದರು.

# ಶೆಹಬಾಜ್ ಷರೀಫ್, ಅಸಿಮ್ ಮುನೀರ್‌ರನ್ನು ಹೊಗಳಿದ ಡೊನಾಲ್ಡ್ ಟ್ರಂಪ್ !

ವಾಷಿಂಗ್ಟನ್: ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಮತ್ತು ದೇಶದ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರನ್ನು ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶ್ಲಾಘಿಸಿದ್ದಾರೆ. ಶ್ವೇತಭವನದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಟ್ರಂಪ್, ಕಳೆದ ವಾರ ಶ್ವೇತಭವನದಲ್ಲಿ ಭೇಟಿಯಾದ ಪಾಕಿಸ್ತಾನಿ ನಾಯಕರನ್ನು 'ಅದ್ಭುತ' ಎಂದು ಕರೆದರು ಮತ್ತು ಇಸ್ರೇಲ್ ಮತ್ತು ಹಮಾಸ್ ನಡುವಿನ ಯುದ್ಧವನ್ನು ಕೊನೆಗೊಳಿಸುವ ಗುರಿಯನ್ನು




ಹೊಂದಿರುವ ತನ್ನ 20 ಅಂಶಗಳ ಪ್ರಸ್ತಾಪಕ್ಕೆ ಇಸ್ಲಾಮಾಬಾದ್ ಆರಂಭದಿಂದಲೂ ಬೆಂಬಲಿಸಿದೆ ಎಂದು ಹೇಳಿದರು.

# ನೆತನ್ಯಾಹು ಅವರು ಕತಾರ್‌ನ ಕ್ಷಮೆಯಾಚಿಸಿದ್ದಾರೆ ಎಂದ ಅಮೆರಿಕ !



ವಾಷಿಂಗ್ಟನ್: ಹಮಾಸ್ ನಾಯಕರನ್ನು ಗುರಿಯಾಗಿಸಿ ದೋಹಾದ ಮೇಲೆ ನಡೆಸಿದ ದಾಳಿಗೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಕತಾರ್‌ನ ಕ್ಷಮೆಯಾಚಿಸಿದ್ದಾರೆ ಎಂದು ಅಮೆರಿಕ ತಿಳಿಸಿದೆ. 'ನೆತನ್ಯಾಹು ಶ್ವೇತಭವನದಿಂದ ದೂರವಾಣಿ ಕರೆ ಮಾಡಿ ಕತಾರ್ ಪ್ರಧಾನಿ ಮೊಹಮ್ಮದ್ ಬಿನ್ ಅಬ್ದುಲ್ ರಹಮಾನ್ ಅಲ್‌ಥಾನಿ ಅವರ ಕ್ಷಮೆಯಾಚಿಸಿದರು. ದಾಳಿಯಲ್ಲಿ ಕತಾರ್‌ನ ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದಕ್ಕೆ ತೀವ್ರ ವಿಷಾದ ವ್ಯಕ್ತಪಡಿಸಿದರು. ಭವಿಷ್ಯದಲ್ಲಿ ಇಂತಹ ದಾಳಿ ನಡೆಸುವುದಿಲ್ಲ ಎಂದು ಮಾತುಕೊಟ್ಟರು' ಎಂದು ಶ್ವೇತಭವನದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.


# ಕಾರ್ಯಾಚರಣೆ ವರ್ಗಾಯಿಸಲು ಮುಂದಾದ ಅಮೇರಿಕಾದ ಕಂಪನಿಗಳು

ವಾಷಿಂಗ್ಟನ್ : ಅಮೆರಿಕ ಡೊನಾಲ್ಡ್ ಟ್ರಂಪ್ ಅವರ H-1B ವೀಸಾ ಅರ್ಜಿ ಶುಲ್ಕ ಹೆಚ್ಚಳ ಕ್ರಮವು, ಅಮೆರಿಕದ ಕಂಪನಿಗಳು ಭಾರತಕ್ಕೆ ನಿರ್ಣಾಯಕ ಕೆಲಸಗಳನ್ನು ವರ್ಗಾಯಿಸುವಂತೆ ಒತ್ತಾಯಿಸಿದೆ. ಟ್ರಂಪ್ ಅವರ ಆತುರದ ನಿರ್ಧಾರ ಭಾರತಕ್ಕೆ ವರದಾನವಾಗಿ ಪರಿಣಮಿಸುವ ಸಾಧ್ಯತೆಯೇ ದಟ್ಟವಾಗತೊಡಗಿದೆ. ಈ ಕುರಿತು ಮಾತನಾಡಿರುವ ಅಮೆರಿಕ ಅರ್ಥಶಾಸ್ತ್ರಜ್ಞರು ಮತ್ತು ಉದ್ಯಮವನ್ನು ಚೆನ್ನಾಗಿ ಬಲ್ಲ ತಜ್ಞರು, ಈ ಬದಲಾವಣೆಗಳು ಭಾರತದ ಹಣಕಾಸು, ಸಂಶೋಧನೆ ಮತ್ತು ಅಭಿವೃದ್ಧಿ




ಕಾರ್ಯಾಚರಣೆಗಳನ್ನು ನಿರ್ವಹಿಸುವ ಜಾಗತಿಕ ಸಾಮರ್ಥ್ಯ ಕೇಂದ್ರಗಳ ಬೆಳವಣಿಗೆಗೆ ವೇಗ ನೀಡುತ್ತದೆ.

# ಕಾಂತಾರ ಸೇರಿದಂತೆ ಭಾರತದ ಎಲ್ಲಾ ಸಿನಿಮಾಗಳಿಗೂ ಎಫೆಕ್ಟ್



ಬೆಂಗಳೂರು : ಸ್ಯಾಂಡಲ್‌ವುಡ್‌ನ ಭಾರೀ ನಿರೀಕ್ಷೆಯ 125ಕೋಟಿ ರೂ. ಬಜೆಟ್‌ನ ಕಾಂತಾರ ಸಿನಿಮಾ ಇನ್ನೇನು ಎರಡೇ ದಿನಗಳಲ್ಲಿ ವಿಶ್ವದಾದ್ಯಂತ ರಿಲೀಸ್ ಆಗಲು ರೆಡಿಯಾಗಿದೆ. ಅಮೆರಿಕದಿಂದ ಡೊನಾಲ್ಡ್ ಟ್ರಂಪ್ ಕಾಂತಾರ ಸೇರಿದಂತೆ ಭಾರತದ ಎಲ್ಲಾ ಸಿನಿಮಾಗಳಿಗೂ ಎಫೆಕ್ಟ್ ಆಗುವ ರೀತಿಯ ನಿರ್ಧಾರ ಘೋಷಣೆ ಮಾಡಿದ್ದಾರೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಟ್ರೂತ್ ಸೋಷಿಯಲ್‌ನಲ್ಲಿ ಪೋಸ್ಟ್ ಮಾಡಿದ್ದು, ಅಮೆರಿಕದ ಚಲನಚಿತ್ರೋದ್ಯಮವನ್ನು ವಿದೇಶಗಳು ಕಳ್ಳತನ ಮಾಡಿವೆ ಎಂದು ಹೇಳಿಕೊಂಡಿದ್ದು, ಈ ಪರಿಸ್ಥಿತಿಯನ್ನು "ಮಗುವಿನಿಂದ ಕ್ಯಾಂಡಿ ಕದಿಯುವುದಕ್ಕೆ" ಹೋಲಿಸಿದ್ದಾರೆ.

# ಚೀನಾದಲ್ಲಿ ವಿಶ್ವದ ಅತಿ ಎತ್ತರದ 'ಸೇತುವೆ' ಲೋಕಾರ್ಪಣೆ

ಚೀನಾ : ವಿಶ್ವದ ಅತಿ ಎತ್ತರದ ಸೇತುವೆ ಲೋಕಾರ್ಪಣೆಗೊಂಡಿದ್ದು, 2 ಗಂಟೆಗಳ ಪ್ರಯಾಣ ಜಸ್ಟ್ 2 ನಿಮಿಷಕ್ಕೆ ಇಳಿಕೆಯಾಗಿದೆ. ಚೀನಾ ಅಧಿಕೃತವಾಗಿ ವಿಶ್ವದ ಅತಿ ಎತ್ತರದ ಸೇತುವೆ ಎಂದು ಗುರುತಿಸಲ್ಪಟ್ಟ ಹುವಾಜಿಯಾಂಗ್ ಗ್ರ್ಯಾಂಡ್ ಕ್ಯಾನ್ಯನ್ ಸೇತುವೆಯು ಹುವಾಜಿಯಾಂಗ್ ಗ್ರ್ಯಾಂಡ್ ಕ್ಯಾನ್ಯನ್ನ ಎರಡೂ ಬದಿಗಳ ನಡುವಿನ ಪ್ರಯಾಣದ ಸಮಯವನ್ನು ಕಡಿಮೆ ಮಾಡುತ್ತದೆ, ಎರಡು ಗಂಟೆಗಳ ಪ್ರಯಾಣವನ್ನು ಎರಡು ನಿಮಿಷಗಳ ದಾಟುವಿಕೆಗೆ ಇಳಿಸುತ್ತದೆ. ಈ ಸೇತುವೆ ನಿರ್ಮಾಣವಾದ ಬಳಿಕ 2 ಗಂಟೆಗಳ ಪ್ರಯಾಣ ಜಸ್ಟ್ 2 ನಿಮಿಷಕ್ಕೆ ಇಳಿಕೆಯಾಗಿದೆ.



# ಪಾಕನ್ನು ಬಗ್ಗು ಬಡಿದು ಟ್ರೋಫಿ ಗೆದ್ದ ಭಾರತ




ದುಬೈ : ಟಾರ್ಗೆಟ್ ಅಲ್ಪವಾಗಿದ್ದರೂ ಆರಂಭದಲ್ಲೇ ವಿಕೆಟ್ ಕಳೆದುಕೊಂಡ ಟೀಂ ಇಂಡಿಯಾ ತೀವ್ರ ಸಂಕಷ್ಟಕ್ಕೆ ಸಿಲುಕಿತ್ತು. ಒಂದು ಹಂತದಲ್ಲಿ ಭಾರತ ಗೆಲ್ಲೋದೆ ಕಷ್ಟ ಅನ್ನೋ ವಾತಾವರಣ ನಿರ್ಮಾಣವಾಗಿತ್ತು. ಪ್ರತಿ ಎಸೆತದ ಬಳಿಕ ಭಾರತ ಮೇಲೆ ಒತ್ತಡ ತೀವ್ರಗೊಳ್ಳುತ್ತಿತ್ತು. ತಿಲಕ್ ವರ್ಮಾ ನೀಡಿದ ಹೋರಾಟದಿಂದ ಭಾರತ ಏಷ್ಯಾಕಪ್ ಟ್ರೋಫಿ ಗೆದ್ದುಕೊಂಡಿದೆ. ಏಷ್ಯಾಕಪ್ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನ ಬಗ್ಗು ಬಡಿದ ಭಾರತ ಏಷ್ಯಾಕಪ್ ಟ್ರೋಫಿ ಗೆದ್ದುಕೊಂಡಿತು.

# ಇತಿಹಾಸ ಸೃಷ್ಟಿಸಿದ ಶೀತಲ್ ದೇವಿ

ಹೈದೆರಾಬಾದ್ : 18ವರ್ಷದ ಭಾರತೀಯ ಬಿಲ್ಲುಗಾರ್ತಿ ಶೀತಲ್ ದೇವಿ ಪ್ಯಾರಾ ವರ್ಲ್ಡ್ ಆರ್ಚರಿ ಚಾಂಪಿಯನ್‌ಶಿಪ್‌ನಲ್ಲಿ ಮಹಿಳೆಯರ ಸಂಯುಕ್ತ ವೈಯಕ್ತಿಕ ಚಿನ್ನ ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದರು. ಟರ್ಕಿಯ ವಿಶ್ವದ ನಂ. 1 ಓಜ್ನೂರ್ ಕ್ಯೂರ್ ಗಿರ್ಡಿ ಅವರನ್ನ ತೀವ್ರ ಪೈಪೋಟಿಯಿಂದ ಎದುರಿಸಿದ ಶೀತಲ್ 146–143 ಅಂಕಗಳಿಂದ ಜಯಗಳಿಸಿದರು.



# ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿ



ಬೆಂಗಳೂರು : ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿಯಾಗಿದ್ದು, ಜ್ಯೋತಿ ಸಂಜೀವಿನಿ ಯೋಜನೆಯು ಸ್ಥಗಿತಗೊಳಿಸಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿದೆ. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತ ಸದಸ್ಯರಿಗೆ ನಗದು ರಹಿತ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಉಲ್ಲೇಖಿತರನ್ವಯ ಅಕ್ಟೋಬರ್ 01, 2025 ಜಾರಿಗೊಳಿಸಲು ಹಾಗೂ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಬಂದ ದಿನಾಂಕದಿಂದ ಪ್ರಸ್ತುತ ಜಾರಿಯಲ್ಲಿರುವ ಜ್ಯೋತಿ ಸಂಜೀವಿನಿ ಯೋಜನೆಯು ಸ್ಥಗಿತಗೊಳ್ಳುವುದು ಎಂದು ಸರ್ಕಾರವು ಆದೇಶಿಸಿದೆ.

# ಬೆಳೆ ಹಾನಿ : ಹೆಕ್ಟೇರ್‌ಗೆ 26 ಸಾವಿರ ರೂ. ಪರಿಹಾರ

ಕಲಬುರಗಿ: ಬೆಳೆ ಹಾನಿಯಾದ ರೈತರಿಗೆ NDRF ಮಾರ್ಗಸೂಚಿ ಅನುಸಾರ ಒಂದು ಹೆಕ್ಟೇರ್ ಖುಷ್ಕಿ ಜಮೀನಿಗೆ 8,500ರೂ., ನೀರಾವರಿ ಒಂದು ಹೆಕ್ಟೇರ್‌ಗೆ 17,000ರೂ. ಪರಿಹಾರ ನೀಡಬೇಕಿದೆ. ಇದಕ್ಕೆ ಹೆಚ್ಚುವರಿಯಾಗಿ ಖುಷ್ಕಿ, ನೀರಾವರಿ ಜಮೀನಿಗೆ 8,500ರೂ. ಹೆಚ್ಚು ಕೊಡಬೇಕು ಎಂದು ತೀರ್ಮಾನಿಸಲಾಗಿದೆ. ವೈಮಾನಿಕ ಸಮೀಕ್ಷೆ ಬಳಿಕ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿಜಯಪುರ, ಯಾದಗಿರಿ, ಬೀದರ್ ಮತ್ತು ಕಲಬುರಗಿ ಜಿಲ್ಲೆಗಳ ಶಾಸಕರು, ಸಚಿವರು ಮತ್ತು ಅಧಿಕಾರಿಗಳ ಜೊತೆ ನಡೆಸಿದ ಸಿಎಂ ಸಿದ್ಧರಾಮಯ್ಯ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಹವಾಮಾನ ತೀವ್ರ ಪರಿಣಾಮವನ್ನು ರಾಜ್ಯ ಎದುರಿಸುತ್ತಿದೆ.



# ಟಿಸಿಎಸ್‌ನಿಂದ ಭಾರತದಲ್ಲಿ 80 ಸಾವಿರ ಉದ್ಯೋಗ ಕಡಿತ

ಬೆಂಗಳೂರು : ಟಾಟಾ ಕನ್ಸಲ್ಟೆನ್ಸಿ ಸರ್ವೀಸ್ (ಟಿಸಿಎಸ್) ಈಗಾಲೇ ಉದ್ಯೋಗ ಕಡಿತ ಮಾಡಿದೆ. ಇತ್ತೀಚೆಗಷ್ಟೇ 12,000 ಉದ್ಯೋಗ ಕಡಿತ ಭಾರಿ ಕೋಲಾಹಲಕ್ಕೆ ಕಾರಣವಾಗಿತ್ತು. ಇದರ ಬೆನ್ನಲ್ಲೇ ಇದೀಗ ಭಾರತದಲ್ಲಿ ಬರೋಬ್ಬರಿ 80,000 ಉದ್ಯೋಗ ಕಡಿತ ಮಾಡುತ್ತಿದೆ. ಉದ್ಯೋಗಿಗಳಿಗೆ ಈಗಾಗಲೇ ಇಮೇಲ್ ಮೂಲಕ ಮಾಹಿತಿ ನೀಡಲಾಗಿದ್ದು, ರಾಜೀನಾಮೆ ನೀಡುವಂತೆ ಸೂಚನೆ ನೀಡಲಾಗಿದೆ. ಬರೋಬ್ಬರಿ ಎಂಬತ್ತು ಸಾವಿರ ಉದ್ಯೋಗ ಕಡಿತ ಗೊಳಿಸಲು ಟಿಸಿಎಸ್ ಮುಂದಾಗಿದೆ ಎಂದು ವರದಿ ಹೇಳುತ್ತಿದೆ. ಟಿಸಿಎಸ್ ಈ ಬಾರಿ ಉದ್ಯೋಗ ಕಡಿತದ ಲಿಸ್ಟ್ ರೆಡಿ ಮಾಡಿದೆ.




# ಮದ್ದೂರು ಕಲ್ಲು ತೂರಾಟ ಪೂರ್ವ ಯೋಜಿತ : ಪೊಲೀಸ್ ವರದಿ

ಮದ್ದೂರು : ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶ ಮೆರವಣಿಗೆಯ ವೇಳೆ ನಡೆದ ಕಲ್ಲು ತೂರಾಟ ಪೂರ್ವ ಯೋಜಿತವಾಗಿತ್ತೆಂಬುದು ಪೊಲೀಸರು ನಡೆಸಿದ ತನಿಖೆಯಲ್ಲಿ ಬಟಾಬಯಲಾಗಿದೆ. ಘಟನೆ ಸಂಬಂಧ ಪೊಲೀಸರು ಆರಂಭದಲ್ಲಿ 22 ಮಂದಿ ಆರೋಪಿಗಳನ್ನು ಗುರುತಿಸಿದ್ದರು. 29 ಮಂದಿಯನ್ನು ಗುರುತಿಸಿ ವಶಕ್ಕೆ ಪಡೆದಿದ್ದರು. ಆರೋಪಿಗಳ ಸಂಖ್ಯೆ 32ಕ್ಕೆ ಏರಿಕೆಯಾಗಿದೆ. ಎಲ್ಲ 32 ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ. ತನಿಖೆಯ ವೇಳೆ ಆರೋಪಿಗಳು ಬಾಯಿ ಬಿಟ್ಟಿದ್ದು, ಸ್ವಾಮಿ ಎಂಬುವವರ ನೇತೃತ್ವದಲ್ಲಿ ಕೂರಿಸಿದ್ದ ಗಣೇಶ ಮೂರ್ತಿ ಮೇಲೆ ಕಲ್ಲು ತೂರಲು ಪೂರ್ವಯೋಜನೆ ಮಾಡಲಾಗಿತ್ತು ಎಂದು ಒಪ್ಪಿಕೊಂಡಿದ್ದಾರೆ.



# ರಾಜ್ಯದ ಶಾಲಾ ಮಕ್ಕಳಿಗೆ ಶನಿವಾರ ಬ್ಯಾಗ್ ರಹಿತ ದಿನ



ಬೆಂಗಳೂರು : ರಾಜ್ಯದ ಶಾಲಾ ಮಕ್ಕಳಿಗೆ ಸಂಭ್ರಮ ಶನಿವಾರ'– (ಬ್ಯಾಗ್ ರಹಿತ ದಿನ) – ಕಾರ್ಯಕ್ರಮದ ವರದಿಯನ್ನು ಸಲ್ಲಿಸುವ ಕುರಿತು ಶಿಕ್ಷಣ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ. ವಿಷಯಕ್ಕೆ ಸಂಬಂಧಿಸಿದಂತೆ ಮಕ್ಕಳಿಗೆ ಸಂತಸದಾಯಕ ಕಲಿಕೆಯನ್ನು ನೀಡಲು ಹಾಗೂ ಶಾಲಾ ಬ್ಯಾಗ್ ಹೊರೆಯನ್ನು ತಗ್ಗಿಸುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಪ್ರತಿ ತಿಂಗಳು ಒಂದು ಶನಿವಾರದಂದು ಬ್ಯಾಗ್ ರಹಿತ ದಿನವನ್ನು ಆಚರಿಸುವಂತೆ ಉಲ್ಲೇಖ–1ರ ಪತ್ರದಲ್ಲಿ ಆದೇಶಿಸಲಾಗಿದೆ. ಅದರಂತೆ, ಪ್ರಸಕ್ತ ಸಾಲಿನಲ್ಲಿ ಕ್ರಮವಹಿಸಲು ಉಲ್ಲೇಖ–2ರ ಸುತ್ತೋಲೆಯಲ್ಲಿ ಮಾರ್ಗದರ್ಶನ ನೀಡಲಾಗಿದೆ.


# ವಿಶ್ವದ ಮೂರನೇ ಕೆಟ್ಟ ನಗರವೆಂದು ಗುರುತಿಸಿಕೊಂಡ ಬೆಂಗಳೂರು!

ಬೆಂಗಳೂರು : ಐಟಿ ಬಿಟಿ ನಗರವೆಂದು ಕರೆಸಿಕೊಂಡಿರುವ ಬೆಂಗಳೂರು ವರ್ಷದಿಂದ ವರ್ಷಕ್ಕೆ ಬೆಳೆಯುತ್ತಲೇ ಇದೆ. ಆದರೆ, ಇತ್ತೀಚಿನ ವರ್ಷಗಳಲ್ಲಿ, ನಗರದ ಮೋಡಿ ಮಸುಕಾಗಲು ಪ್ರಾರಂಭಿಸಿದೆ. ಒಂದು ಕಾಲದಲ್ಲಿ ಕನಸಿನ ತಾಣವಾಗಿದ್ದ ನಗರವು ಅನೇಕ ನಿವಾಸಿಗಳಿಗೆ ದೈನಂದಿನ ಹೋರಾಟದ ಸ್ಥಳವಾಗಿದೆ. ದೀರ್ಘಕಾಲದ ಸಂಚಾರ ದಟ್ಟಣೆ, ರಸ್ತೆ ಗುಂಡಿಗಳು, ಹೆಚ್ಚುತ್ತಿರುವ ಮಾಲಿನ್ಯ, ನೀರಿನ ಕೊರತೆ ಮತ್ತು ಗಗನಕ್ಕೇರಿರುವ ಆಸ್ತಿ ಬೆಲೆಗಳು ಬೆಂಗಳೂರಿನ ಜೀವನವನ್ನು ಹೆಚ್ಚು ಒತ್ತಡದಿಂದ ಕೂಡಿರುವಂತೆ ಮಾಡಿದೆ. ಮುಂಬರುವ ದಶಕದಲ್ಲಿ ಆ ಎಲ್ಲಾ ಬೆಳವಣಿಗೆ ಶ್ರೇಣಿ 2 ನಗರಗಳಿಂದ ಬರುತ್ತದೆ ಎಂದು ನಾನು ಭಾವಿಸುತ್ತೇನೆ' ಎಂದು ಅಹುಜಾ ಹೇಳಿದರು.



# ಭಾರತಮಾತೆಯ ಚಿತ್ರವಿರುವ ವಿಶೇಷ ನಾಣ್ಯ ಬಿಡುಗಡೆ

ನವದೆಹಲಿ : ರಾಷ್ಟ್ರೀಯ ಸ್ವಯಂಸೇವಕ ಸಂಘ ತನ್ನ ಶತಮಾನೋತ್ಸವ ಆಚರಿಸಿಕೊಳ್ಳುತ್ತಿರುವ ಹಿನ್ನಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ವಿಶೇಷ 100 ರೂಪಾಯಿ ನಾಣ್ಯ ಹಾಗೂ ಅಂಚೆ ಚೀಟಿಯನ್ನು ರಿಲೀಸ್ ಮಾಡಿದರು. ನಾಣ್ಯದ ಮುಂಬದಿಯಲ್ಲಿ 100 ರೂಪಾಯಿಯನ್ನು ಗುರುತಿಸುವ ಅಂಕಿ ಇದ್ದರೆ, ಹಿಂಬದಿಯಲ್ಲಿ 'ವರದ ಮುದ್ರೆ'ಯಲ್ಲಿ ಸಿಂಹದ ಮೇಲೆ ಕುಳಿತಿರುವ ಭಾರತ ಮಾತೆಯ ಚಿತ್ರವಿದೆ ಮತ್ತು ಸ್ವಯಂಸೇವಕರು ಆಕೆಯ ಮುಂದೆ ಸಮರ್ಪಣಾ ಭಾವದಿಂದ ನಮಸ್ಕರಿಸುವ ಚಿತ್ರ ಮುದ್ರಿಸಲಾಗಿದೆ. ಅದರೊಂದಿಗೆ ಹಿಂದಿ ಹಾಗೂ ಇಂಗ್ಲೀಷ್‌ನಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ 100 ವರ್ಷ ಎಂದು ಬರೆಯಲಾಗಿದೆ.



# ಪ್ರಚೋದನಾತ್ಮಕ ಹೇಳಿಕೆಯ ಮೌಲ್ವಿ : ನುಗ್ಗಿದ ಯೋಗಿ ಬುಲ್ಡೋಜರ್

ಉತ್ತರ ಪ್ರದೇಶ : ಭಾರತದಲ್ಲಿ ಇತ್ತೀಚೆಗೆ ಐ ಲವ್ ಮೊಹಮ್ಮದ್ ಭಾರಿ ಟ್ರೆಂಡ್ ಆಗಿತ್ತು. ಈ ಟ್ರೆಂಡ್ ಏನು ಎಂದು ತಿಳಿದುಕೊಳ್ಳುವ ಮುಂಚೆ ಅಭಿಯಾನ ಮುದುಡಿತ್ತು. ಸೆಪ್ಟೆಂಬರ್ 26ರಂದು ಉತ್ತರ ಪ್ರದೇಶದ ಬರೇಲಿಯಲ್ಲಿ ಐ ಲವ್ ಮೊಹಮ್ಮದ್ ಪ್ರತಿಭಟನೆ ಕಾವು ಪಡೆದಿತ್ತು. ಕಲ್ಲೂ ತೂರಾಟ, ಹಿಂಸಾಚಾರ ನಡೆಸಿದ್ದರು. ಹಲವು ಪೊಲೀಸರು ಗಾಯಗೊಂಡಿದ್ದರು. ಸಾರ್ವಜನಿಕ ಆಸ್ತಿಪಾಸ್ತಿ ನಾಶವಾಗಿತ್ತು. ಏಕಾಏಕಿ ಪ್ರತಿಭಟನೆ ಹಿಂಸಾಚಾರ ರೂಪಕ್ಕೆ ತಿರುಗಿತ್ತು. ಈ ಪ್ರತಿಭಟನೆಗೆ ಪ್ರಚೋದನೆ ನೀಡಿದ, ಬೆಂಬಲಿಸಿದ ಅಲಾ ಹಜ್ರತ್ ದರ್ಗಾ ಮೌಲನಾ ಮೊಹ್ಸಿನ್ ರಾಜಾನನ್ನು ಪೊಲೀಸರು ಬಂಧಿಸಿದ್ದು, ಮೌಲಿಯ ಆಸ್ತಿಯ ಮೇಲೆ ಯೋಗಿ ಅಧಿತ್ಯನಾಥ್ ಬುಲ್ಡೋಜರ್ ನುಗ್ಗಿಸಿದ್ದಾರೆ ಎಂದು ವರದಿಯಾಗಿದೆ.



# 'ಅನಂತ್ ಶಾಸ್ತ್ರ' ಮೇಲ್ಮೈಯಿಂದ ಗಾಳಿಗೆ ಹಾರುವ ಕ್ಷಿಪಣಿ ಶಸ್ತ್ರಾಸ್ತ್ರ



ನವದೆಹಲಿ : ರಕ್ಷಣಾ ವಲಯದಲ್ಲಿ ದೇಶೀಕರಣಕ್ಕೆ ಪ್ರಮುಖ ಉತ್ತೇಜನ ನೀಡುವ ನಿಟ್ಟಿನಲ್ಲಿ, ಪಾಕಿಸ್ತಾನ ಮತ್ತು ಚೀನಾದ ಗಡಿಗಳಲ್ಲಿ ವಾಯು ರಕ್ಷಣೆಯನ್ನು ಬಲಪಡಿಸಲು ಭಾರತೀಯ ಸೇನೆಯು ಐದರಿಂದ ಆರು ರೆಜಿಮೆಂಟ್‌ಗಳ 'ಅನಂತ್ ಶಾಸ್ತ್ರ' ಮೇಲ್ಮೈಯಿಂದ ಗಾಳಿಗೆ ಹಾರುವ ಕ್ಷಿಪಣಿ ಶಸ್ತ್ರಾಸ್ತ್ರ ವ್ಯವಸ್ಥೆಗಳನ್ನು ಖರೀದಿಸಲು ಟೆಂಡರ್ ನೀಡಿದೆ. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (ಡಿಆರ್‌ಡಿಒ) ಅಭಿವೃದ್ಧಿಪಡಿಸಿದ ಅನಂತ್ ಶಾಸ್ತ್ರ ವಾಯು ರಕ್ಷಣಾ ಕ್ಷಿಪಣಿ ವ್ಯವಸ್ಥೆಯನ್ನು ಖರೀದಿಸಲು ಭಾರತೀಯ ಸೇನೆಯು ಸರ್ಕಾರಿ ಸ್ವಾಮ್ಯದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ (ಬಿಇಎಲ್) ಗೆ ಟೆಂಡರ್ ನೀಡಿದೆ.

# ಭಾರತೀಯ ವಾಯುಪಡೆಗಾಗಿ 62,370 ಕೋಟಿ ವೆಚ್ಚದಲ್ಲಿ 97 ತೇಜಸ್!

ನವದೆಹಲಿ: ಭಾರತೀಯ ವಾಯುಪಡೆಗಾಗಿ 62,370 ಕೋಟಿ ವೆಚ್ಚದಲ್ಲಿ 97 ತೇಜಸ್ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯವು ಹಿಂದೂಸ್ಥಾನ್ ಏರೊನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ಜೊತೆಗೆ ಒಪ್ಪಂದ ಮಾಡಿಕೊಂಡಿದೆ. 2027–28ರ ವೇಳೆಗೆ ಈ ಯುದ್ಧ ವಿಮಾನಗಳನ್ನು ಎಚ್‌ಎಎಲ್ ವಿತರಿಸಲಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಭದ್ರತಾ ಸಂಪುಟ ಸಮಿತಿ (ಸಿಸಿಎಸ್) ಈ ಬೃಹತ್ ಖರೀದಿಗೆ ಒಪ್ಪಿಗೆ ನೀಡಿದ ಸುಮಾರು ಒಂದು ತಿಂಗಳ ನಂತರ ಒಪ್ಪಂದ ಮಾಡಿಕೊಳ್ಳಲಾಗಿದೆ. ಸರ್ಕಾರಿ ಸ್ವಾಮ್ಯದ ಎಚ್‌ಎಎಲ್‌ಗೆ ನೀಡಲಾದ ಎರಡನೇ ಗುತ್ತಿಗೆ ಇದಾಗಿದೆ.



# ಮಧ್ಯಪ್ರದೇಶದಲ್ಲಿ ಬಲವಂತದ ಮತಾಂತರ ಆರೋಪ

ಮುಂಬೈ : ಮದರಸಾಗಳಲ್ಲಿ ನೂರಾರು ಹಿಂದೂ ಮಕ್ಕಳನ್ನು ಬಲವಂತವಾಗಿ ಮತಾಂತರ ಮಾಡಿರುವ ಗಂಭೀರ ಪ್ರಕರಣ ಮಧ್ಯಪ್ರದೇಶದಲ್ಲಿ ನಡೆದಿದೆ ಎಂಬ ಮಾತುಗಳು ಕೇಳಿಬಂದಿವೆ. ಮಧ್ಯಪ್ರದೇಶದ 27 ಮದರಸಾಗಳಲ್ಲಿ 556 ಹಿಂದೂ ಮಕ್ಕಳ ಬಲವಂತದ ಧಾರ್ಮಿಕ ಮತಾಂತರ ಮಾಡಲಾಗಿದೆಯೆಂಬ ದೂರು ಕೇಳಿಬಂದಿದೆ. ಪ್ರಕರಣ ಸಂಬಂಧ ಮಧ್ಯಪ್ರದೇಶ ಸರ್ಕಾರಕ್ಕೆ ನೋಟಿಸ್ ನೀಡಿ 15 ದಿನಗಳಲ್ಲಿ ವಿವರವಾದ ಮಾಹಿತಿ ನೀಡುವಂತೆ ಸೂಚಿಸಲಾಗಿದೆ. ಇಸ್ಲಾಂ ಧರ್ಮವನ್ನು ಅಳವಡಿಸಿಕೊಳ್ಳಲು ಒತ್ತಡ ಹೇರುತ್ತಿವೆ ಎಂದು ದೂರಲಾಗಿದೆ.





ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಫ್ರಾಡ್ ಖುಷಿ ಹಾಡನ್ನು ಬಿಡುಗಡೆ ಮಾಡಿದ ನಿರ್ಮಾಪಕ ಕೆ. ಮಂಜು

'ಒಳಿತು ಮಾಡು ಮನುಸ' ಹಾಡಿನ ಖ್ಯಾತಿಯ ನಮ್ ಖುಷಿ, ನಿರ್ಮಾಣ, ನಿರ್ದೇಶನ ಹಾಗೂ ನಟನೆಯ 'ಫ್ರಾಡ್ ಖುಷಿ' ಚಿತ್ರದ ಎರಡನೇ ಹಾಡು 'ಇವನೇ ಇವನೇ ಫ್ರಾಡು ಖುಷಿ' ಇತ್ತೀಚೆಗೆ ಬಿಡುಗಡೆಯಾಗಿದೆ. ನಮ್ ಖುಷಿ ಬರೆದು ಶ್ರೀಗುರು ಸಂಗೀತ ನೀಡಿರುವ ಹಾಗೂ ಸೋಮಶೇಖರ್ ಅವರು ಹಾಡಿರುವ ಈ ಹಾಡನ್ನು ನಿರ್ಮಾಪಕ ಕೆ.ಮಂಜು ಬಿಡುಗಡೆ ಮಾಡಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಮ್ ಖುಷಿ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿ ಈ ಹಾಡು ಬಿಡುಗಡೆಯಾಗಿದೆ. ಸಿನಿಮಾ ಮಾಡುವುದಕ್ಕೆ ದುಡ್ಡು ಬೇಕಾಗಿಲ್ಲ, ಒಳ್ಳೆಯ ತಂಡ ಬೇಕು. ಒಳ್ಳೆಯ ತಂಡವೆಂದರೆ, ಒಬ್ಬರನ್ನೊಬ್ಬರು ಪ್ರೀತಿಸುವಂತಿರಬೇಕು. ಅವರು ಬೆಳೆದರೆ ನಾವು ಖುಷಿಪಡಬೇಕು. ನಾವು ಬೆಳೆದರೆ ಅವರು ಖುಷಿಪಡಬೇಕು. ಸಣ್ಣ ವಿಷಯಗಳಿಗೆ ಕಿತ್ತಾಟಗಳಾಗುತ್ತವೆ. ಅದನ್ನೆಲ್ಲಾ ಮೀರಿದ ಒಂದು ತಂಡವಿರಬೇಕು. ಮಧು, ಸೋಮಶೇಖರ್, ಹರಿಕೃಷ್ಣ, ಮಂಜುನಾಥ್ ಮುಂತಾದವರ ಸಹಕಾರದಿಂದ ಈ ಚಿತ್ರ ರೂಪುಗೊಳ್ಳುತ್ತಿದೆ. ನಾನು ಕಲಾವಿದರಿಗೆ ದುಡ್ಡು ಕೊಟ್ಟು ನಟನೆ ಮಾಡಿಸುವುದಿಲ್ಲ. ಕಲಾವಿದರಲ್ಲಿ ಎರಡು ತರಹದ ಕಲಾವಿದರಿರುತ್ತಾರೆ. ಕೆಲವರು ವೃತ್ತಿಪರ ಕಲಾವಿದರು. ಇನ್ನೂ ಕೆಲವರು ಪ್ಯಾಶನ್‌ಗಾಗಿ ಅಭಿನಯ ಮಾಡುತ್ತಾರೆ. ಅವರಿಗೆ ಹಣದ ಅವಶ್ಯಕತೆ ಇರುವುದಿಲ್ಲ. ವೃತ್ತಿಪರ ಕಲಾವಿದರಿಗೆ ದುಡ್ಡು ಕೊಡಬೇಕಾಗುತ್ತದೆ. ಆದರೆ, ಇನ್ನೊಂದು ಪ್ಯಾಶನ್ ಇರುವವರನ್ನು ಆಯ್ಕೆ ಮಾಡಿಕೊಂಡರೆ, ಅವರಿಗೆ ಹಣ ನೀಡದಿದ್ದರೂ ಆಗುತ್ತದೆ. ಜೊತೆಗೆ ಅವರಿಂದ ಸಹಕಾರವೂ ಸಿಗುತ್ತದೆ. ನಾನು ಅಂಥವರನ್ನೇ ಆಯ್ಕೆ ಮಾಡಿಕೊಂಡು ಚಿತ್ರ ಮಾಡುತ್ತಿದ್ದೇನೆ. ಈ ಚಿತ್ರ ಡಿಸೆಂಬರ್ ತಿಂಗಳಲ್ಲಿ ಬಿಡುಗಡೆಯಾಗುತ್ತದೆ. ಅಕ್ಟೋಬರ್ 10ರಿಂದ ಚಿತ್ರೀಕರಣ ಶುರುವಾಗಲಿದೆ. ಇದು ದೊಡ್ಡ ಬಜೆಟ್ ಚಿತ್ರವಲ್ಲ. ಆದರೆ, ಕಂಟೆಂಟ್ ಬಹಳ ಚೆನ್ನಾಗಿದೆ. ನನ್ನ ಮೂರು ಯಶಸ್ವಿ ಹಾಡುಗಳನ್ನು ಈ ಚಿತ್ರದಲ್ಲಿ ಬಳಸಿಕೊಳ್ಳುತ್ತಿದ್ದೇನೆ. ಕಡಿಮೆ ಬಜೆಟ್‌ನಲ್ಲಿ ಈ ಚಿತ್ರ ಮಾಡುತ್ತಿದ್ದೇನೆ. ಶಂಕರ್ ಛಾಯಾಗ್ರಹಣ ಮತ್ತು ಶ್ರೀ ಗುರು ಸಂಗೀತ ಈ ಚಿತ್ರಕ್ಕಿದೆ.



## ಬಂಡಿ ಮಹಾಕಾಳಿ ಸನ್ನಿಧಿಯಲ್ಲಿ ಶ್ರೀಮುರಳಿ ಹೊಸ ಚಿತ್ರದ ಮುಹೂರ್ತ

ಬಘೀರ ಸಿನಿಮಾದ ಸಕ್ಸಸ್ ಬಳಿಕ ರೋರಿಂಗ್ ಸ್ಟಾರ್ ಶ್ರೀಮುರಳಿ ಪರಾಕ್ ಎಂಬ ಚಿತ್ರ ಒಪ್ಪಿಕೊಂಡಿದ್ದಾರೆ. ಇಂದು ಬೆಂಗಳೂರಿನ ಬಂಡಿ ಮಹಾಕಾಳಿ ದೇಗುಲದಲ್ಲಿ ಪರಾಕ್ ಚಿತ್ರದ ಮುಹೂರ್ತ ನೆರವೇರಿದೆ. ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಕ್ಲ್ಯಾಪ್ ಮಾಡಿ ಇಡೀ ತಂಡಕ್ಕೆ ಶುಭ ಹಾರೈಸಿದರು. ಬಳಿಕ ಸುದ್ದಿಗಾರರೊಂದಿಗೆ ಶ್ರೀಮುರಳಿ ಮಾತನಾಡಿ, "ಪರಾಕ್ ವಿಂಟೇಜ್ ಸ್ಟೈಲ್‌ನಲ್ಲಿ ನಡೆಯುವ ಸಿನಿಮಾ. ಮುಂದಿನ ಚಿತ್ರ ಯಾವ ರೀತಿ ಕಥೆ ಆಯ್ಕೆ ಮಾಡಬೇಕು ಎಂಬ ಟೆನ್ಷನ್ ಇತ್ತು. ಸುಮಾರು 200 ಕಥೆ ಕೇಳಿದ್ದೆ. ಪರಾಕ್ ಸಿನಿಮಾ ತಂಡದ ಜೊತೆ ಎರಡು ವರ್ಷ ಈಗಾಗಲೇ ಟ್ರಾವೆಲ್ ಮಾಡಿದ್ದೆ. ಈ ತಿಂಗಳಿಂದ ಚಿತ್ರದ ಶೂಟಿಂಗ್ ಶುರುವಾಗಲಿದೆ. ಚರಣ್‌ರಾಜ್ ಸಂಗೀತ ನಿರ್ದೇಶನ ಮಾಡಲಿದ್ದಾರೆ" ಎಂದು ಮಾಹಿತಿ ನೀಡಿದರು. ಯುವ ಪ್ರತಿಭೆ ಹಾಲೇಶ್ ಕೋಗುಂಡಿ ಈ ಚಿತ್ರವನ್ನ ಡೈರೆಕ್ಷನ್ ಮಾಡುತ್ತಿದ್ದಾರೆ. ಇವರಿಗೆ ಇದು ಮೊದಲ ಚಿತ್ರವಾಗಿದೆ. ಈ ಮೊದಲು ಕೆಲವು ಕಿರು ಚಿತ್ರ ಮಾಡಿರೋ ಅನುಭವ ಇದೆ. ಇದೀಗ ಪರಾಕ್ ಮೂಲಕ ಡೈರೆಕ್ಟರ್ ಆಗುತ್ತಿದ್ದಾರೆ. ಬ್ರ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಈ ಪರಾಕ್ ಸಿನಿಮಾ ನಿರ್ಮಾಣವಾಗುತ್ತಿದೆ. ಚರಣ್ ರಾಜ್ ಸಂಗೀತ, ಸಂದೀಪ್ ವಲ್ಲುರಿ ಕ್ಯಾಮೆರಾ, ಉಲ್ಲಾಸ್ ಹೈದೂರ್ ಕಲಾ ನಿರ್ದೇಶನ, ಇಂಚರಾ ಸುರೇಶ್ ಕಾಸ್ಟ್ಯೂಮ್ ಡಿಸೈನ್ ಮಾಡುತ್ತಿದ್ದಾರೆ. ಶೀಘ್ರದಲ್ಲೇ ಉಳಿದ ಅಪ್ ಡೇಟ್ ನ್ನು ಚಿತ್ರತಂಡ ರಿವೀಲ್ ಮಾಡಲಿದೆ.



## ವರ್ಣತರಂಗ ಮೂರು ಹಾಡುಗಳ ಬಿಡುಗಡೆ

ವರ್ಣತರಂಗ ಮೂರು ಹಾಡುಗಳ ಬಿಡುಗಡೆ ಕಾರ್ಯಕ್ರಮ ಶ್ರೀ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು. ಶ್ರೀ ಪಾಷನಾಮೂರ್ತಿ ಸಿನಿ ಕ್ರಿಯೇಶನ್ಸ್ ಬ್ಯಾನರ್ ಅಡಿಯಲ್ಲಿ ಬೆಳ್ತಂಗಡಿ ಉದ್ಯಮಿ ಬಿ.ಶಿವಕುಮಾರ್ ಬಂಡವಾಳ ಹೂಡಿರುವುದು ಮೂರನೇ ಅನುಭವ. ಸೆಲ್ವರಾಜ್ ಸಹ ನಿರ್ಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ತೀರ್ಥೆಶ್ ಕೊರಮೇರು ಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಕೊನೆಯ ಮುಖವೆಂದು ಇಂಗ್ಲೀಷ್‌ದಲ್ಲಿ ಅಡಿಬರಹ ಇರಲಿದೆ. ಎಸಿಪಿ ಪಾತ್ರದಲ್ಲಿ ತಿಲಕ್ ನಾಯಕ. ಜೀವಿತಾ ನಾಯಕಿ ಪತ್ರಕರ್ತೆಯಾಗಿ ಸಾಕ್ಷಿ ಮೇಘನಾ ಉಪನಾಯಕಿ. ಹ್ಯಾಕರ್ ಅಗಿ ವರ್ಧನ್. ಉಳಿದಂತೆ ಹೇಮಂತ್, ರಮೇಶ್ ಪಂಡಿತ್, ಬಲರಾಜವಾಡಿ, ಟೆನ್ನಿಸ್‌ಕೃಷ್ಣ, ಜಯರಾಮ್, ಬಿರಾದಾರ್, ಭಗತ್, ಸುಂದರ್‌ಭಟ್ ಮುಂತಾದವರು ನಟಿಸಿದ್ದಾರೆ. ಸಂಗೀತ ಆಕಾಶ್ ರೆಡ್ಡಿ-ಯಶ ವಂತ್‌ಭೂಪತಿ, ಛಾಯಾಗ್ರಹಣ ಮನುಗೌಡ, ಸಂಕಲನ ವೆಂಕಿ ಯುಡಿವಿ, ಸಾಹಿತ್ಯ ವಿ. ಎನ್.ಸ್ವಾಮಿ-ಆಕಾಶ್‌ರೆಡ್ಡಿ-ಮಿಥುನ್‌ಸುವರ್ಣ, ಕಾರ್ಯಕಾರಿ ನಿರ್ಮಾಪಕ ಕೆ. ಬಾಲಸುಬ್ರಮಣ್ಯನ್, ಸಾಹಸಥ್ರಿಲ್ಲರ್ ಮಂಜು-ಕುಂಗುಫೂ ಚಂದ್ರು-ನರಸಿಂಹ, ನೃತ್ಯ ನಾಗಿ-ಆನಂದ್ ಅವರದಾಗಿದೆ.ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು ನಾನು ಮೂಲಕ ವಿಎಫ್‌ಎಕ್ಸ್ ಟೆಕ್ನಿಷಿಯನ್ ಆಗಿದ್ದು, ಕಿರುಚಿತ್ರ ಸಿದ್ದಗೊಳಿಸಿದ್ದೇನೆ ಎಂದರು.



## ದಿಲ್ಮಾರ್ ಸಿನಿಮಾದ ಮೊದಲ ಹಾಡು ಅನಾವರಣ

ಕೆಜಿಎಫ್ ಸಿನಿಮಾದ ಸಂಭಾಷಣೆಕಾರ ಚಂದ್ರಮೌಳಿ ನಿರ್ದೇಶನ ಮಾಡಿರುವ ಚೊಚ್ಚಲ ಸಿನಿಮಾ ದಿಲ್ಮಾರ್ ತೆರೆಗೆ ಬರಲು ಸಜ್ಜಾಗಿದೆ. ಟೀಸರ್ ಮೂಲಕ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಮೊದಲ ಹಾಡು ಬಿಡುಗಡೆ ಕಾರ್ಯಕ್ರಮ ನಿನ್ನೆ ಎಂಎಂಬಿ ಲೆಗಸಿಯಲ್ಲಿ ನಡೆಯಿತು. ರೋರಿಂಗ್ ಸ್ಟಾರ್ ಶ್ರೀಮುರಳಿ ದಿಲ್ಮಾರ್ ಚಿತ್ರದ ನೀನಿಲ್ಲದೇ ಎಂಬ ಪ್ಯಾಥೋ ಗೀತೆಯನ್ನು ಅನಾವರಣ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದರು. ಶ್ರೀಮುರಳಿ ಮಾತನಾಡಿ, ನಿರ್ಮಾಪಕರು ಒಳ್ಳೆ ಪ್ರಯತ್ನ ಮಾಡಿದ್ದಾರೆ. ಒಳ್ಳೆದಾಗುವ ವಿಷಯಗಳು ಕೆಲವೊಮ್ಮೆ ತಡ ಆಗುತ್ತವೆ. ಕಷ್ಟ ಕೊಡುತ್ತವೆ. ಆ ಬಗ್ಗೆ ಯೋಚನೆ ಮಾಡಬೇಡಿ. ಚಂದ್ರಮೌಳಿ ಮೇಲೆ ಒಂದು ಕಣ್ಣಿತ್ತು. ನೀವೆಲ್ಲಾ ಟ್ಯಾಲೆಂಟ್ ಡೈರೆಕ್ಟರ್, ರೈಟರ್. ನೀವು ಜಾಸ್ತಿ ಸಿನಿಮಾ ಮಾಡಿದರೆ ನಮಗೆ ಒಳ್ಳೊಳ್ಳೆ ಸಿನಿಮಾ ಬರುತ್ತದೆ. ನೀವು ತಡ ಮಾಡಬಾ ರದು. ರಾವ್ ಚಿತ್ರದಲ್ಲಿ ಪಾತ್ರವಾಗಿ ಕಾಣಿಸುತ್ತಾರೆ. ಹೀರೋ ಆಕ್ಟಿಂಗ್ ಚೆನ್ನಾಗಿದೆ. ಡೈರೆಕ್ಟರ್‌ಗೆ ಒಳ್ಳೆ ಟೇಸ್ಟ್ ಇರುವುದು ಕಾಣಿಸುತ್ತದೆ. ಸಾಧನೆ ಸುಲಭ ಅಲ್ಲ. ಬರುತ್ತದೆ. ಸಿಗುತ್ತದೆ. ಅಚ್ಚುಕಟ್ಟಾಗಿ ಕೆಲಸ ಮಾಡಿದರೆ ಯಾರಿಂದಲೂ ಅದನ್ನು ಕಿತ್ತುಕೊಳ್ಳಲು ಆಗಿಲ್ಲ. ಅದು ನಿಮಗೆ ಈ ಸಿನಿಮಾ ಮೂಲಕ ಆಗುತ್ತದೆ. ಇಡೀ ತಂಡಕ್ಕೆ ಒಳ್ಳೆಯದಾಗಲಿ ಎಂದು ಹಾರೈಸಿದರು. ನಟ ರಾಮ್ ಮಾತನಾಡಿ, ಹೀರೋ ಆಗಬೇಕಂತ 19 ವರ್ಷದಿಂದ ಹೋರಾಟ ಮಾಡುತ್ತಿದ್ದೆ. ಆ ಅವಕಾಶ ದಿಲ್ಮಾರ್ ಮೂಲಕ ನೆರವೇರಿದೆ ಎಂದರು.




## ಪುನೀತ್ ರುದ್ರನಾಗ್ ನಿರ್ದೇಶನದ ಐತಿಹಾಸಿಕ ಚಿತ್ರಕ್ಕೆ ನವೆಂಬರ್‌ನಿಂದ ಚಿತ್ರೀಕರಣ

ಸುರಮ್ ಮೂವೀಸ್ ಲಾಂಛನದಲ್ಲಿ ಜಯರಾಮ ದೇವಸಮುದ್ರ ನಿರ್ಮಿಸುತ್ತಿರುವ ಹಾಗೂ ಪುನೀತ್ ರುದ್ರನಾಗ್ ಚೊಚ್ಚಲ ನಿರ್ದೇಶನದಲ್ಲಿ ಮೂಡಿಬರುತ್ತಿರುವ ನೂತನ ಚಿತ್ರದ ನಾಯಕನಾಗಿ ರೋರಿಂಗ್ ಸ್ಟಾರ್ ಶ್ರೀಮುರಳಿ ಅಭಿನಯಿಸುತ್ತಿದ್ದಾರೆ. 500 ವರ್ಷಗಳ ಹಿಂದಿನ ಕಥೆ ಇದಾಗಿದೆ. ನವೆಂಬರ್‌ನಲ್ಲಿ ಚಿತ್ರೀಕರಣ ಆರಂಭವಾಗಲಿದೆ. ನಮ್ಮ ಸುರಮ್ ಮೂವೀಸ್ ಲಾಂಛನದಲ್ಲಿ ಇತ್ತೀಚೆಗೆ ತೆರೆಕಂಡ "ನಿದ್ರಾದೇವಿ next door" ಚಿತ್ರಕ್ಕೆ ತಾವು ನೀಡಿರುವ ಪ್ರೋತ್ಸಾಹಕ್ಕೆ ಧನ್ಯವಾದ. ಈಗ ನಮ್ಮ ಸಂಸ್ಥೆಯಿಂದ ಮತ್ತೊಂದು ನೂತನ ಚಿತ್ರ ಆರಂಭವಾಗಲಿದೆ. ಪಿರಿಯಾಡಿಕ್ ಜಾನರ್‌ನ ಈ ಚಿತ್ರದಲ್ಲಿ ಶ್ರೀಮುರಳಿ ನಾಯಕರಾಗಿ ನಟಿಸುತ್ತಿದ್ದಾರೆ. ಈವರೆಗೂ ಮಾಡಿರದ ಪಾತ್ರದಲ್ಲಿ ಶ್ರೀಮುರಳಿ ಕಾಣಿಸಿಕೊಳ್ಳಲಿದ್ದಾರೆ. ಪುನೀತ್ ರುದ್ರನಾಗ್ ಕಥೆ ಬರೆದು ನಿರ್ದೇಶಿಸುತ್ತಿದ್ದಾರೆ. ಸಂಕೇತ್ ಛಾಯಾಗ್ರಹಣ, ನಿರ್ಮಲ್ ಕುಮಾರ್ ವಿ.ಎಫ್.ಎಕ್ಸ್ ಹಾಗೂ ಅಮರ್ ಅವರ ಕಲಾ ನಿರ್ದೇಶನವಿರುವ ಈ ನೂತನ ಚಿತ್ರಕ್ಕೆ ರಾಮು ಅವರು ಚಿತ್ರಕಥೆ ಹಾಗೂ ಸಂಭಾಷಣೆ ಬರೆಯುತ್ತಿದ್ದಾರೆ.



## 'ಮಡ್ಡಿ' ಸಿನಿಮಾ ನಿರ್ದೇಶಕರ ಹೊಸ ಸಾಹಸ

'ಮಡ್ಡಿ' ಚಿತ್ರದ ಮೂಲಕ ಭಾರತದ ಮೊದಲ ಮಡ್ ರೇಸಿಂಗ್ ಚಿತ್ರವನ್ನು ನಿರ್ದೇಶಿಸಿದ್ದ ಡಾ. ಪ್ರಗಭಾಲ್, ಇದೀಗ ಮತ್ತೊಂದು ವಿಶಿಷ್ಟ ಹಾಗೂ ಸಾಹಸಭರಿತ ವಿಷಯ



ವನ್ನು ಭಾರತೀಯ ಸಿನಿಮಾ ಪ್ರೇಮಿಗಳ ಮುಂದೆ ತರಲು ಸಜ್ಜಾಗಿದ್ದಾರೆ. ನಿರ್ಮಾಪಕರಾದ ಪ್ರೇಮಾ ಕೃಷ್ಣದಾಸ್ ಮತ್ತು ಸಿದೇವದಾಸ್ ಅವರ 'ಪಿಕೆ7 ಸ್ಟುಡಿಯೋಸ್' ಮೂಲಕ 'ಜಾಕಿ' ಹೆಸರಿನ ಸಿನಿಮಾ ಕೈಗೆತ್ತಿಕೊಂಡಿದ್ದಾರೆ. ಸಾಂಪ್ರದಾಯಿಕ ಮದುರೈ ಟಗರು ಕಾಳಗವನ್ನೇ ಆಧಾರವಾಗಿಟ್ಟುಕೊಂಡ ಕಥೆ ಇದಾಗಿರಲಿದೆ. ಮದುರೈ ಪ್ರವಾಸದ ವೇಳೆ ಟಗರು ಕಾಳಗ ಮೊದಲ ಬಾರಿ ಕಂಡ ನಿರ್ದೇಶಕ ಪ್ರಗ ಭಾಲ್ ಅವರಿಗೆ ಅದು ಕೇವಲ ಕ್ರೀಡೆ ಅಲ್ಲ, ಟಗರು ಹಾಗೂ ಅದರ ಪಾಲಕರ ನಡುವಿನ ಆಳವಾದ ಬಾಂಧವ್ಯದ ಸಾಂಸ್ಕೃತಿಕ ಅಭಿವ್ಯಕ್ತಿ ಎಂದು ತಿಳಿಯಿತು. 2022ರಿಂದಲೇ ಮದುರೈಯಲ್ಲೇ ವಾಸವಿದ್ದು ಸಂಶೋಧನೆ ನಡೆಸಿ, ನೈಜ ಕಥೆಯನ್ನು ಬರೆದಿದ್ದಾರವರು. ಪಾತ್ರ ಧಾರಿಗಳು ಟಗರುಗಳ ಜೊತೆಗೆ ನೈಜ ಸಂಬಂಧ ಬೆಳೆಸಬೇಕಾಯಿತು.

## ಪ್ರಭಾಸ್ ಅಭಿನಯದ 'ದಿ ರಾಜಾಸಾಬ್' ಟ್ರೈಲರ್ ಬಿಡುಗಡೆ !

ಬಹುನಿರೀಕ್ಷಿತ ರೆಬೆಲ್ ಸ್ಟಾರ್ ಪ್ರಭಾಸ್ ಅವರ ಪ್ಯಾನ್-ಇಂಡಿಯಾ ಚಿತ್ರ 'ದಿ ರಾಜಾಸಾಬ್' ಟ್ರೈಲರ್ ಅಂತಿಮವಾಗಿ ಬಿಡುಗಡೆಯಾಗಿದೆ. ಅಭಿಮಾನಿಗಳಿಗೆ ಥ್ರಿಲ್ ನೀಡುವುದರ ಜತೆಗೆ ಅಚ್ಚರಿಗೆ ದೂಡಿದೆ. ಹಿಂದೆಂದೂ ಕಾಣದ ರೀತಿಯಲ್ಲಿ ಪ್ರಭಾಸ್ ಕಾಣಿಸಿಕೊಂಡಿದ್ದಾರೆ. ಹಾರರ್ ಕಾಮಿಡಿ ಶೈಲಿಯ ಈ ಸಿನಿಮಾದಲ್ಲಿ, ಹೃದಯಸ್ಪರ್ಶಿ ಭಾವನೆಗಳನ್ನೂ ಬೆರೆಸಿದ್ದಾರೆ ನಿರ್ದೇಶಕ ಮಾರುತಿ. ಭಾರತದ ಅತಿದೊಡ್ಡ ಹಾರರ್ ಫ್ಯಾಂಟಸಿ ಡ್ರಾಮಾ ಭಾರತದ ಅತಿದೊಡ್ಡ ಹಾರರ್ ಫ್ಯಾಂಟಸಿ ಡ್ರಾಮಾ ಎಂದು ಬಿಂಬಿಸಲಾಗಿರುವ 'ದಿ ರಾಜಾಸಾಬ್', ಮೇಕಿಂಗ್, ದೊಡ್ಡ ಕ್ಯಾನ್ವಾಸ್ ಮೂಲಕವೇ ಎಲ್ಲರನ್ನು ನಿಬ್ಬೆರಗಾಗಿಸಿದೆ. ಈ ಚಿತ್ರವು ಭಾರತದಲ್ಲಿ ಇದುವರೆಗೆ ಕಾಣದ ಅತಿದೊಡ್ಡ ಹಾರರ್ ಸೆಟ್ ಹೊಂದಿದೆ. ನೋಡುಗರನ್ನು ಭಯಕ್ಕೆ ಕೆಡವುದರ ಜತೆಗೆ ಆ ದೃಶ್ಯ ವೈಭವವನ್ನು ಮೀರಿ, ಪ್ರೀತಿ, ಕುಟುಂಬ ಮತ್ತು ಪೂರ್ವಜರ ಪರಂಪರೆಯ ವಿಷಯಗಳನ್ನು ಈ ಸಿನಿಮಾದಲ್ಲಿ ಹೇಳಿದ್ದಾರೆ ನಿರ್ದೇಶಕರು. ಬ್ಲಾಕ್‌ಬಸ್ಟರ್ ಸಿನಿಮಾ 'ಕಲ್ಕಿ 2898 ಎಡಿ' ಮತ್ತೆ ದೊಡ್ಡ ಪರದೆಗೆ ಮರಳುತ್ತಿದ್ದಾರೆ ಪ್ರಭಾಸ್. ನಟನಾ ಮೋಡಿ, ಮೈನವಿರೇಳಿಸುವ ಆಕ್ಷನ್ ಮಿಶ್ರಣ, ಪ್ರಭಾಸ್ ಎದುರಾಗುವ ಸೂಚನೆ ನೀಡಿದಂತಿದೆ.



## 'ತೀರ್ಥರೂಪ ತಂದೆಯವರಿಗೆ' ಭಾವನಾತ್ಮಕ ಹಾಡು ರಿಲೀಸ್

ಹೊಂದಿಸಿ ಬರೆಯಿರಿ ಸಿನಿಮಾ ಖ್ಯಾತಿಯ ರಾಮೇನಹಳ್ಳಿ ಜಗನ್ನಾಥ ಅವರ ಹೊಸ ಪ್ರಯತ್ನ ತೀರ್ಥರೂಪ ತಂದೆಯವರಿಗೆ. ಟೈಟಲ್ ಮೂಲಕವೇ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ. ನನದೇ ಜಗದಲಿ ಎಂಬ ಹಾಡಿಗೆ ರಾಮೇನಹಳ್ಳಿ ಜಗನ್ನಾಥ್ ಅರ್ಥ ಪೂರ್ಣ ಪದಗಳನ್ನು ಪೋಣಿಸಿದ್ದಾರೆ. ಭಾವನಾತ್ಮಕವಾಗಿ ಸಾಗುವ ಗೀತೆ ನೋಡುಗರನ್ನು ಕಾಡುತ್ತದೆ. ಸುಂದರ ದೃಶ್ಯಗಳ ಜೊತೆಯಲ್ಲಿ ಕಾಡುವ ಸಾಹಿತ್ಯ ಹಾಗೂ ಜೋ ಕೋಸ್ಟ ಸಂಗೀತವಿರುವ ನನದೇ ಜಗದಲಿ ಸಾಂಗ್‌ಗೆ ಕಪಿಲ್ ಕಪಿಲನ್ ಧ್ವನಿಯಾಗಿದ್ದಾರೆ. ತೀರ್ಥರೂಪ ತಂದೆಯವರಿಗೆ ಎಂಬ ಶೀರ್ಷಿಕೆ ಇದ್ದರೂ ಕೂಡ ಇಲ್ಲಿ ಅಮ್ಮ ಮಗನ ಬಾಂಧವ್ಯ ಅನಾವರಣಗೊಳಿಸುವ ಮೂಲಕ ನಿರ್ದೇಶಕರು ಚಿತ್ರದ ಮೇಲಿನ ನಿರೀಕ್ಷೆಯನ್ನು ದುಪ್ಪಟ್ಟು ಮಾಡಿದ್ದಾರೆ. ತೆಲುಗಿನ ಕಿರುತೆರೆಯಲ್ಲಿ ಹೆಸರು ಮಾಡಿರುವ ಕನ್ನಡದ ಹುಡುಗ ನಿಹಾರ್ ಮುಕೇಶ್ ನಾಯಕನ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ.



## ಕಲರ್ಸ್ ಕನ್ನಡದಲ್ಲಿ ಧಾರಾವಾಹಿ 'ಶ್ರೀ ಗಂಧದ ಗುಡಿ'

ಕರ್ನಾಟಕದಲ್ಲಿ ಸೌಂದರ್ಯವಿದೆ, ಸೌಕರ್ಯವಿದೆ. ಎಲ್ಲಕ್ಕಿಂತ ಹೆಚ್ಚಾಗಿ ಔದಾರ್ಯವಿದೆ. ಕರುನಾಡು ಎಲ್ಲರನ್ನ ಪ್ರೀತಿಯಿಂದ ಸ್ವೀಕಾರ ಮಾಡುತ್ತೆ. ಕರುನಾಡ ತಾಯಿ ಎಲ್ಲರನ್ನ ತನ್ನ ಮಕ್ಕಳಂತೆ ನೋಡ್ತಾಳೆ, ಕಾಪಾಡ್ತಾಳೆ. ಕರುಳ ಕುಡಿಗಳ ಸುಖಕ್ಕಾಗಿ ಎಲ್ಲವನ್ನೂ ಸಹಿಸಿಕೊಳ್ಳೋ ಮಿಡಿವ ತಾಯಿ ಅವಳು. ಅವಳು ಪ್ರೀತಿಯ ಕುಡಿ, ಅವಳು ನೆಲೆಸಿದ ನಾಡು ಶ್ರೀ ಗಂಧದ ಗುಡಿ. 'ಶ್ರೀ ಗಂಧದ ಗುಡಿ' ನಮ್ಮ ಕನ್ನಡ ಮಣ್ಣಿನ ಸುಗಂಧ ಹೊಂದಿದ ಅಂದದ ಚೆಂದದ ಪದ. ಅಪ್ಪಟ ಕನ್ನಡತನವನ್ನ ಹೊರ ಹೊಮ್ಮಿಸೋ ಪದ. ಇಂತಹ ಅಪ್ಪಟ ಕನ್ನಡತನದಿಂದ ಮನೆ ಮಾತಾಗಿರೋದು ಕಲರ್ಸ್ ಕನ್ನಡ ಚಾನೆಲ್. ಮನ ಮುಟ್ಟೋ ಕತೆಗಳನ್ನ ಕನ್ನಡಿಗರ ಮನೆ ಮನಗಳಿಗೆ ಮುಟ್ಟಿಸ್ತೀರೋ ಕಲರ್ಸ್ ಕನ್ನಡ ಚಾನೆಲ್ ಇದೀಗ 'ಶ್ರೀ ಗಂಧದ ಗುಡಿ, ಪ್ರೀತಿಯ ಕುಡಿ' ಅನ್ನೋ ವಿನೂತನ ಧಾರಾವಾಹಿಯನ್ನ ಪ್ರೇಕ್ಷಕರಿಗೆ ತಲುಪಿಸ್ತಿದೆ.



## ದೇವರಾಜ್ ಕುಮಾರ್ ನಿರ್ದೇಶನ, ನಿರ್ಮಾಣ, ನಟನೆಯ 'ಆಯುಧ' ತೆರೆಗೆ

ದೇವರಾಜ್ ಕುಮಾರ್ ನಿರ್ಮಾಣ, ನಿರ್ದೇಶನ ಹಾಗೂ ನಟನೆಯ 'ಆಯುಧ' ಚಿತ್ರವನ್ನು ವೀಕ್ಷಿಸಿದ ಪ್ರಾದೇಶಿಕ ಸೆನ್ಸಾರ್ ಮಂಡಳಿ ಎ ಪ್ರಮಾಣ ಪತ್ರ ನೀಡಿದೆ. ಚಿತ್ರ ಸದ್ಯದಲ್ಲೇ ರಾಜ್ಯಾದ್ಯಂತ ಬಿಡುಗಡೆಯಾಗಲಿದೆ. ಚಿತ್ರ ಇದೇ ವರ್ಷ ಅಥವಾ ಮುಂದಿನ ವರ್ಷದ ಆರಂಭದಲ್ಲಿ ತೆರೆಗೆ ಬರಲಿದೆ. ದೇವರಾಜ್ ಕುಮಾರ್ ಅವರು ಸದ್ದಿಲ್ಲದೆ ಚಿತ್ರೀಕರಣ ಮುಗಿಸಿ ದೇವರಾಜ್ ಪಿಚ್ಚರ್ ಸ್ಟುಡಿಯೋ ಬ್ಯಾನರ್‌ನಲ್ಲೇ ಈ ಚಿತ್ರ ನಿರ್ಮಾಣ ಮಾಡಿದ್ದಾರೆ. ನಿರ್ದೇಶನದ ಜವಾಬ್ದಾರಿಯನ್ನು ಹೊತ್ತಿರುವ ದೇವರಾಜ್ ಕುಮಾರ್ ನಾಯಕ ನಟನಾಗಿಯೂ ಕೂಡ ಕಾಣಿಸಿಕೊಂಡಿದ್ದಾರೆ. ಹೊನ್ನಾವರ ಬೈಂದೂರು, ಚನ್ನಪಟ್ಟಣ ಹಾಗೂ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆದಿದೆ. ನಾಲ್ಕು ಹಾಡುಗಳು ಹಾಗೂ ನಾಲ್ಕು ಸಾಹಸ ಸನ್ನಿವೇಶಗಳಿರುವ ಈ ಚಿತ್ರ ಆಕ್ಷನ್ ಥ್ರಿಲ್ಲರ್ ಫ್ಯಾಮಿಲಿ ಡ್ರಾಮಾ ಚಿತ್ರವಾಗಿರುತ್ತದೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಬಾಲಯ್ಯ ಅಭಿನಯದ ಅಖಂಡ–2 ಬಿಡುಗಡೆಗೆ ಸಜ್ಜು



ಟಾಲಿವುಡ್ ನಟ ನಂದಮೂರಿ ಬಾಲಕೃಷ್ಣ ಅಭಿನಯದ ಬಹು ನಿರೀಕ್ಷಿತ 'ಅಖಂಡ 2' ಸಿನಿಮಾ ಬಿಡುಗಡೆ ದಿನಾಂಕ ನಿಗದಿಯಾಗಿದೆ. ಅಖಂಡ ಚಿತ್ರದ ಮುಂದುವರಿದ ಭಾಗವಾಗಿರುವ ಅಖಂಡ–2 ಡಿಸೆಂಬರ್ 5, 2026 ರಂದು ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ತೆರೆಗೆ ಬರಲಿದೆ. ಬೊಯಪಾಟಿ ಶ್ರೀನು ಹಾಗೂ ಬಾಲಕೃಷ್ಣ ಕಾಂಬಿನೇಷನ್‌ನ ನಾಲ್ಕನೇ ಸಿನಿಮಾ ಇದಾಗಿದ್ದು, ಈ ಹಿಂದೆ ಬಂದಿದ್ದ ಸಿಂಹ, ಲೆಜೆಂಡ್ ಹಾಗೂ 2021ರಲ್ಲಿ ಬಿಡುಗಡೆ ಆಗಿದ್ದ ಅಖಂಡ ಸಿನಿಮಾಗಳು ಭಾರಿ ಯಶಸ್ಸುಗಳಿಸಿವೆ. ಇದೀಗ 'ಅಖಂಡ–2'ರ ನಿರ್ದೇಶನದಲ್ಲಿ ಬೊಯಪಾಟಿ ತೊಡಗಿದ್ದಾರೆ. ಪ್ರತಿಷ್ಠಿತ 14 ರೀಲ್ಸ್ ಪ್ಲಸ್ ಬ್ಯಾನರ್ ಅಡಿಯಲ್ಲಿ ರಾಮ್ ಅಚಂತ ಮತ್ತು ಗೋಪಿಚಂದ್ ಅಚಂತ ನಿರ್ಮಿಸಿರುವ ಈ ಚಿತ್ರವನ್ನು ಎಂ ತೇಜಸ್ವಿನಿ ನಂದಮೂರಿ ಪ್ರಸ್ತುತಪಡಿಸಿದ್ದಾರೆ.

## ರಾಷ್ಟ್ರ ಪ್ರಶಸ್ತಿ ಪಡೆದುಕೊಂಡ 'ಕಂದೀಲು'



ಕಂದೀಲು ಚಿತ್ರವು 71ನೇ ರಾಷ್ಟ್ರ ಪ್ರಶಸ್ತಿ ಪಡೆದುಕೊಂಡ ಸಲುವಾಗಿ ಕಲಾವಿದರು, ತಂತ್ರಜ್ಞರಿಗೆ ಬೆಳ್ಳಿ ನಾಣ್ಯ ನೀಡಿ ಗೌರವಿಸಿದ ನಂತರ ನಿರ್ದೇಶಕಿ ಯಶೋಧ ಕೊಟ್ಟುಕತ್ತಿರ ಮಾತನಾಡಿ, ಸಿನಿಮಾ ಶುರುವಾದಾಗಿನಿಂದ ಎಲ್ಲರೂ ಶ್ರಮವಹಿಸಿ ಕೆಲಸ ನಿರ್ವಹಿಸಿದ್ದಾರೆ. ನಾನು ಎಲ್ಲರನ್ನು ನೆನೆಸಿಕೊಂಡು ಪ್ರಶಸ್ತಿ ಸ್ವೀಕರಿಸಿದೆ. ಏಳೆಂಟು ವರ್ಷದಿಂದ ಚಿತ್ರರಂಗದಲ್ಲಿ ಗುರುತಿಸಿಕೊಂಡು, ಎರಡು ಕೊಡವ, ಎರಡು ಕನ್ನಡ ಸಿನಿಮಾ ನಿರ್ಮಾಣ ಮಾಡಿದ್ದೇನೆ. ನಂತರ ಸುಮನ್ ನಗರ್‌ಕರ್ ನಟನೆಯ 'ರಂಗಪವ್ರೇಶ' ಚಿತ್ರದ ಮೂಲಕ ನಿರ್ದೇಶಕಿಯಾಗಿ ಪರಿಚಯವಾದೆ. ಪತಿ ನನ್ನ ಸಲುವಾಗಿ ನಿರ್ಮಾಣ ಮಾಡಿದರು. ಕಥೆಗಳ ಸಂಕಲನ ದಿಂದ ಆಯ್ದ ಹೆಣ ಎನ್ನುವ ಕಥೆ ಕಂದೀಲು ಚಿತ್ರ ಆಯಿತು ಎಂದರು.

## ಕೊತ್ತಲವಾಡಿ ನಂತರ ಹೊಸ ಚಿತ್ರ ನಿರ್ಮಾಣದತ್ತ ಯಶ್ ತಾಯಿ

ಖ್ಯಾತ ನಟ ರಾಕಿಂಗ್ ಸ್ಟಾರ್ ಯಶ್ ಅವರ ತಾಯಿ ಪುಷ್ಪ ಅರುಣ್ ಕುಮಾರ್ ತಮ್ಮ ಕಂ ಪ್ರೊಡಕ್ಷನ್ಸ್ ಲಾಂಛನದಲ್ಲಿ ತಮ್ಮ ಮೊದಲ ಚಿತ್ರವಾಗಿ "ಕೊತ್ತಲವಾಡಿ" ಚಿತ್ರವನ್ನು ನಿರ್ಮಿಸಿದ್ದರು. ಆ ಚಿತ್ರ ಜನರ ಮೆಚ್ಚುಗೆಗೂ ಪಾತ್ರವಾಗಿತ್ತು. ಈಗ ವಿಜಯ ದಶಮಿಯ ಶುಭದಿನದಂದು ಕಂ ಪ್ರೊಡಕ್ಷನ್ಸ್ ಮೂಲಕ ಎರಡನೇ ಚಿತ್ರವನ್ನು ನಿರ್ಮಾಣ ಮಾಡುವುದಾಗಿ ಮಾಹಿತಿ ನೀಡಿದ್ದಾರೆ. ಈ ಚಿತ್ರವನ್ನೂ "ಕೊತ್ತಲವಾಡಿ" ನಿರ್ದೇಶಕ ಶ್ರೀರಾಜ್ ಅವರೆ ನಿರ್ದೇಶಿಸಲಿದ್ದಾರೆ. ಬಹುತೇಕ "ಕೊತ್ತಲವಾಡಿ" ಚಿತ್ರದ ತಂತ್ರಜ್ಞರ ತಂಡವೇ ಈ ಚಿತ್ರದಲ್ಲೂ ಮುಂದುವರೆಯಲಿದ್ದಾರೆ ಎಂದ ನಿರ್ಮಾಪಕಿ ಪುಷ್ಪ ಅರುಣ್ ಕುಮಾರ್, ಸದ್ಯದಲ್ಲೇ ನೂತನ ಚಿತ್ರದ ಬಗ್ಗೆ ಹೆಚ್ಚಿನ ಮಾಹಿತಿ ನೀಡುವುದಾಗಿ ಹೇಳಿದ್ದಾರೆ.



## ನ. 14ಕ್ಕೆ ಸಿಂಪಲ್ ಸುನಿ 'ಗತವೈಭವ'

ಸಿಂಪಲ್ ಸುನಿ ನಿರ್ದೇಶನದ ಸಿನಿಮಾ "ಗತವೈಭವ" ತೆರೆಗೆ ಬರಲು ಸಜ್ಜಾಗಿದ್ದು, ನವೆಂಬರ್ 14ರಂದು ಈ ಚಿತ್ರ ವಿಶ್ವಾದ್ಯಂತ ಬಿಡುಗಡೆಯಾಗಲಿದೆ. ಯುವ ಪ್ರತಿಭೆ ದುಶ್ಯಂತ್ ನಾಯಕನಾಗಿ, ಆಶಿಕಾ ರಂಗನಾಥ್ ನಾಯಕಿಯಾಗಿ ಅಭಿನಯಿಸಿದ್ದಾರೆ. ಗತವೈಭವ ಟೀಸರ್ ಅನಾವರಣ ಮಾಡುವ ಮೂಲಕ ಚಿತ್ರತಂಡ ಪ್ರಚಾರ ಕಾರ್ಯ ನಡೆಸಿದೆ. ಈ ವೇಳೆ ನಿರ್ದೇಶಕ ಸಿಂಪಲ್ ಸುನಿ ಮಾತನಾಡಿ, ಗತವೈಭವ ತುಂಬಾ ಸೀರಿಯಸ್ ಆಗಿ ತೆಗೆದುಕೊಂಡ ಪ್ರಾಜೆಕ್ಟ್. ನನ್ನ ಬ್ಯಾನರ್‌ನಡಿ ಮಾಡಬೇಕು ಎಂದುಕೊಂಡ ಸಿನಿಮಾ ಇದು. ದುಶ್ಯಂತ್ ಈ ಪ್ರಾಜೆಕ್ಟ್ ಮಾಡಬೇಕು ಎಂದು ಬರೆದಿತ್ತು. ಅದಕ್ಕೆ ಇದು ಆಗಿದೆ. ನಾಲ್ಕು ಸಿನಿಮಾ ಮಾಡಿದಷ್ಟು ಈ ಜರ್ನಿ ಆಗಿದೆ. ಅಂದುಕೊಂಡ ರೀತಿ ಗತವೈಭವ ಮೂಡಿ ಬಂದಿದೆ ಎಂದರು.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021